ಸಂಪುಟ : 10 ಸಂಚಿಕೆ: 169 ಪುಟ : 4+2 ಬೆಲೆ: 3.00 ರವಿವಾರ ಆಗಸ್ಟ್ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 169 Pages : 4+2 Price : 3.00 Sunday August 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕರೆ

# ಶಿಕ್ಷಣವಂತರಾಗಿ ಸಮಾಜದಲ್ಲಿ ಉನ್ನತ ಹುದ್ದೆ ಅಲಂಕರಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಕಾಯಕ ಮತ್ತು ದಾಸೋಹದ ಮೂಲಕ ಸಮಾಜಕ್ಕೆ ಬೆಳಕು ನೀಡಿದವರಲ್ಲಿ ಶರಣ ಶ್ರೀ ನುಲಿಯ ಚಂದಯ್ಯನವರೂ ಒಬ್ಬರು. ಕಾಯಕವೇ ಲಿಂಗ ಪೂಜೆ ಎಂದು ಸಾರಿದ ಇವರು ಪ್ರತಿಯೊಬ್ಬರೂ ತಮ್ಮ ತಮ್ಮ ಕರ್ತವ್ಯವನ್ನು ಶ್ರದ್ಧೆಯಿಂದ ಮಾಡಬೇಕು ಎಂದು ತಮ್ಮ ವಚನಗಳ ಮೂಲಕ ಸಮಾಜಕ್ಕೆ ಸಂದೇಶ ನೀಡಿದ್ದಾರೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

> ನುಲಿಯ ಚಂದಯ್ಯನವರು ತಮ್ಮ ಅರ್ಥಪೂರ್ಣ ವಚನಗಳ ಮೂಲಕ ಸಮಾಜದ ಅಂಕು-ಡೊಂಕುಗಳನ್ನು ತಿದ್ದುವಲ್ಲಿ ಶ್ರಮಿಸಿದ್ದಾರೆ. ಇವರ ಕಾಯಕವು ಅರಣ್ಯಕ್ಕೆ ಹೋಗಿ ಹುಲ್ಲು ತಂದು ಹಗ್ಗ ಮಾಡಿ ಮಾರುವದಾಗಿತ್ತು. ಹಗ್ಗ ಮಾರಿ ಬಂದ ಹಣದಿಂದ ಅವರು ದಾಸೋಹ ಕೈಗೊಳ್ಳುತ್ತಿದ್ದರು. ಕಾಯಕ ನಿಷ್ಠೆ, ಜಂಗಮ ದಾಸೋಹ ಇವರ ವಚನಗಳಲ್ಲಿ ಗಮನಾರ್ಹವಾದವುಗಳಾಗಿವೆ. ನುಲಿಯ ಚಂದಯ್ಯನವರು ಅನುಭವ ಮಂಟಪದಲ್ಲಿ ಶ್ರೇಷ್ಠ ಶರಣರಾಗಿದ್ದರು. ಕಾಯಕ ಸೇವೆಗಿಂತ ಇನ್ನೊಂದು ಸೇವೆ ಇಲ್ಲ ಎಂದು ಸಾರಿದ ನುಲಿಯ ಚಂದಯ್ಯನವರ ವಚನಗಳ ಸಂದೇಶದ ಕುರಿತು ಹೊಸ ಪೀಳಿಗೆಗೆ ಅರಿವು ಮೂಡಿಸುವ ಕೆಲಸವಾಗಬೇಕು.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ನುಲಿಯ ಚಂದಯ್ಯ ಸಮುದಾಯದವರು ಕ್ರೀಡಾ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿದ್ದಾರೆ. ಗದಗ ಜಿಲ್ಲೆಯಲ್ಲಿ ಉನ್ನತ ಮಟ್ಟದ ಕ್ರೀಡಾ ಸೌಲಭ್ಯಗಳು ಸುಲಭವಾಗಿ ಲಭ್ಯವಾಗುವಂತೆ ಈಗಾಗಲೇ ಅಗತ್ಯಕ್ಕನುಗುಣವಾಗಿ ಕ್ರೀಡಾಂಗಣ, ಈಜುಗೊಳಗಳನ್ನು ತೆರೆಯಲಾಗಿದೆ. ಇವುಗಳ ಸದ್ಬಳಕೆ ಮಾಡಿಕೊಂಡು ಇನ್ನಷ್ಟು ಕ್ರೀಡಾ ಸಾಧನೆ ಮಾಡಬೇಕು. ಸಮಾಜದ ಮಕ್ಕಳು ಶಿಕ್ಷಣವಂತರಾಗಿ ಸಮಾಜದಲ್ಲಿ ಉನ್ನತ ಹುದ್ದೆ ಅಲಂಕರಿಸಬೇಕು. ಪ್ರತಿಯೊಬ್ಬರೂ ತಮ್ಮಲ್ಲಿರುವ ಪ್ರತಿಭೆ ಬಳಸಿಕೊಂಡು ಶ್ರೇಷ್ಠ ವ್ಯಕ್ತಿಗಳಾಗಬೇಕು ಎಂದು ಸಚಿವರು ಕರೆ ನೀಡಿದರು.




ಇದೇ ಸಂದರ್ಭದಲ್ಲಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸಮುದಾಯದ ವಿದ್ಯಾರ್ಥಿಗಳನ್ನು, ▸▸ 3ನೇ ಪುಟಕ್ಕೆ

### ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನ

2024 ಹಾಗೂ 2025ರ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಾದ ಭೂಮಿಕಾ ಪ್ರಶಾಂತ ಬಾಗಲಕೋಟಿ, ಸ್ಫೂರ್ತಿ ತಿಪ್ಪಣ್ಣ ಸೀತಾರಹಳ್ಳಿ, ಯಶಸ್ವಿನಿ ಮಾರುತಿ ಕಟ್ಟಿಮನಿ, ಚಂದ್ರಶೇಖರ ಹನಮಂತಪ್ಪ ಭಜಂತ್ರಿ, ಪೂಜಾ ಪ್ರಶಾಂತ ಬಾಗಲಕೋಟಿ ಹಾಗೂ ಬಿ.ಎ. ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ಪ್ರಸನ್ನ ರಮೇಶ ಗಡಾದ, ವೈದ್ಯಕೀಯ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ಪ್ರತಿಭಾ ಕಟ್ಟಿಮನಿ ಅವರನ್ನು ಸನ್ಮಾನಿಸಲಾಯಿತು.

## ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಭೇಟಿ




■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ ಅವರು ಶನಿವಾರ ನಗರದ ಕಳಸಾಪೂರ ರಸ್ತೆಯಲ್ಲಿರುವ ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿಗೆ ಭೇಟಿ ನೀಡಿ ಅಲ್ಲಿನ ಕಾರ್ಯಚಟುವಟಿಕೆಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಶಶಿಧರ ರೊಳ್ಳಿ, ಎಸ್.ಡಿ. ಸಿಂಗಟಾಲಕೇರಿ, ಕೆ.ಬಿ. ಕಂಬಳಿ, ವೈ.ಡಿ. ಜಡದೆಲಿ, ಎಸ್.ಎಸ್. ಕರಡಿ, ಬಿ.ಎಚ್. ಹ್ಯಾಟಿ, ಆರ್.ಎಂ. ನಿಂಬನಾಯ್ಕರ, ಮಲ್ಲೂರು ಬಸವರಾಜ, ಮಹಾಂತೇಶ ಕುರಿ, ಗುರಿಕಾರ, ಸುರೇಶ ಕೊಪ್ಪದ, ದುರಗಣ್ಣವರ, ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿನ ಆಡಳಿತಾಧಿಕಾರಿ ರಾಮಕೃಷ್ಣ ರೊಳ್ಳಿ, ಪ್ರಾಂಶುಪಾಲ ರಮೇಶ ವಡವಿ, ಮುತ್ತು ಜಡಿ ಸೇರಿದಂತೆ ಸಮಾಜದ ಮುಖಂಡರು, ಗಣ್ಯಮಾನ್ಯರು ಉಪಸ್ಥಿತರಿದ್ದರು.

### ಹರ್ ಘರ್ ತಿರಂಗಾ ಯಾತ್ರೆ ಸಮಾವೇಶದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

# ಮೋದಿ ಆಡಳಿತದಲ್ಲಿ ಭಯೋತ್ಪಾದನೆಯ ನಿಯಂತ್ರಣ

■ ವಿಜಯಸಾಕ್ಷಿ ಸುದ್ದಿ, ನರಗುಂದ

ದೇಶದ ಬೆಂಗಳೂರು, ಹೈದರಾಬಾದ್, ವಾರಣಾಸಿ, ಅಸ್ಸಾಂ, ದಿಲ್ಲಿ, ಪುಣೆ, ಮುಂಬೈ ಸೇರಿದಂತೆ ಹಲವಾರು ಕಡೆ ಭಯೋತ್ಪಾದಕ ಕೃತ್ಯಗಳು ಈ ಹಿಂದೆ ನಿರಂತರವಾಗಿ ನಡೆಯುತ್ತಿದ್ದವು. ಘಟನೆ ನಡೆದಾಗ ಮೇಣದಬತ್ತಿ ಹಚ್ಚಿ ಸಂತಾಪ ಸೂಚಿಸಲಾಗುತ್ತಿತ್ತು. ಮತ್ತೆ ಮರುದಿನ ಭಯೋತ್ಪಾದನೆ ಮುಂದುವರೆಯುತ್ತಿತ್ತು. ಆದರೆ, ಮೋದಿ ಆಡಳಿತದಲ್ಲಿ ಭಯೋತ್ಪಾದಕರನ್ನು ಸಂಪೂರ್ಣವಾಗಿ ಹತ್ತಿಕ್ಕಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

ಅವರು ನರಗುಂದದಲ್ಲಿ ನಡೆದ ಹರ್ ಘರ್ ತಿರಂಗಾ ಯಾತ್ರೆ ಕಾರ್ಯಕ್ರಮದ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದರು.




ಹರ್ ಘರ್ ತಿರಂಗಾ ಯಾತ್ರೆಯನ್ನು ಸ್ವಾತಂತ್ರ್ಯದ 75ನೇ ವರ್ಷದಿಂದ ಆರಂಭಿಸಲಾಯಿತು. ಸುಮಾರು 10 ಕೋಟಿಗೂ ಅಧಿಕ ಮನೆಗಳ ಮೇಲೆ ಭಾರತದ ತ್ರಿವರ್ಣ ಧ್ವಜ ಹಾರಾಡಿತು. ಹೈದರಾಬಾದ್‌ನ ಪಿಂಗ್ಳೆ ಎನ್ನುವರು ಭಾರತದ ಧ್ವಜವನ್ನು ತಯಾರಿಸಿದರು. ಹಲವು ವಿರೋಧದ ನಡುವೆಯೂ ಸ್ವಾತಂತ್ರ್ಯಾನಂತರ ಈ ಧ್ವಜವನ್ನು ಭಾರತೀಯರು ಒಪ್ಪಿಕೊಂಡರು ಎಂದು ಇತಿಹಾಸ ನೆನಪಿಸಿಕೊಂಡರು.

ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ನರೇಂದ್ರ ಮೋದಿ ರೈತರ ಹಿತಾಸಕ್ತಿ ಕಾಯುವ ಭಾರತಾಂಭೆಯ ಹೆಮ್ಮೆಯ ಪುತ್ರ. ಅಮೇರಿಕ ಭಾರತದ ರೈತರು ಬೆಳೆದ ಬೆಳೆಗಳಿಗೆ ಶೇ. 50 ಸುಂಕ ವಿಧಿಸಿತ್ತು. ಆದರೆ, ಅದ್ಯಾವುದಕ್ಕೂ ಬಗ್ಗದ ಮೋದಿ ರೈತರ ಹಿತ ಕಾಪಾಡುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರದಲ್ಲಿ ರೈತರಿಗೆ ಸುರಕ್ಷತೆ ಇರಲಿಲ್ಲ. ನರೇಂದ್ರ ಮೋದಿ ಭಾರತದಲ್ಲಿರುವ ಭಯೋತ್ಪಾದಕರಿಗೆ ಭಯ ಹುಟ್ಟಿಸುವ ಕೆಲಸ ಮಾಡಿದ್ದಾರೆ ಎಂದರು. ಸ್ವಾತಂತ್ರ್ಯದ ನಂತರ ಬಡತನ ನಮ್ಮ ವೈರಿ ಆಯಿತು. ಮೋದಿ ಬಂದ ನಂತರ ಬಡತನ ನಿವಾರಣೆ ಆಗುತ್ತಿದೆ. ದೇಶದಲ್ಲಿ 25 ಕೋಟಿ ಜನರನ್ನು ಬಡತನದಿಂದ ಮೇಲೆತ್ತುವ ಕಾರ್ಯ ಆಗಿದೆ. ನಿರುದ್ಯೋಗ ಹತೋಟಿಗೆ ಬಂದಿದೆ. ರೈತರ ಉತ್ಪಾದನೆ ಹೆಚ್ಚಾಗಿದೆ. ಒಟ್ಟಾರೆಯಾಗಿ ಭಾರತದ ಅಭಿವೃದ್ಧಿ ಪ್ರತಿ ವರ್ಷ ಶೇ. 6.5 ಹೆಚ್ಚಾಗುತ್ತಿದೆ. ದೇಶಕ್ಕಾಗಿ ಬದುಕಬೇಕು, ದೇಶ ಸೇವೆ ಮಾಡಬೇಕು, ದೇಶವನ್ನು ಪ್ರೀತಿಸಬೇಕು. ತ್ರಿವರ್ಣ ಧ್ವಜವನ್ನು ಎತ್ತರಕ್ಕೆ ಹಾರಿಸಿ ದೇಶಭಕ್ತಿ ಮೆರೆಯಬೇಕು ಎಂದರು.

> ಮೋದಿ ಆಡಳಿತದಲ್ಲಿ ತ್ರಿವರ್ಣ ಧ್ವಜಕ್ಕೆ ಮತ್ತಷ್ಟು ರಂಗು ಬಂದಿದ್ದು, ಜಗತ್ತಿನಾದ್ಯಂತ ನಮ್ಮ ತ್ರಿವರ್ಣ ಧ್ವಜಕ್ಕೆ ವಿಶೇಷ ಸ್ಥಾನಮಾನವೂ ಸಿಗುತ್ತಿದೆ. ಬೇರೆ ದೇಶದಲ್ಲಿ ನಡೆದ ಯುದ್ಧದ ಸಮಯದಲ್ಲಿ ನಮ್ಮ ರಾಷ್ಟ್ರ ಧ್ವಜ ಹಿಡಿದು ಜೀವ ಉಳಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣ ಆಗಿದೆ. ಇದು ನಮ್ಮ ಧ್ವಜದ ತಾಕತ್ತು.
>
> – ಸಿ.ಸಿ. ಪಾಟೀಲ.
> ಶಾಸಕರು, ನರಗುಂದ.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಶಾಸಕ ಮಹೇಶ ಟೆಂಗಿನಕಾಯಿ, ಅರವಿಂದ ಬೆಲ್ಲದ, ಮಾಜಿ ಶಾಸಕ ಶಿವರಾಜ ಸಜ್ಜನರ, ಗವಿಸಿದ್ದಪ್ಪ ದ್ಯಾವಣ್ಣನವರ, ಡಾ. ಚಂದ್ರು ಲಮಾಣಿ, ಹಾವೇರಿ ಬಿಜೆಪಿ ಜಿಲ್ಲಾಧ್ಯಕ್ಷ ವಿರೂಪಾಕ್ಷಪ್ಪ ಬಳ್ಳಾರಿ, ಮಹೇಂದ್ರ ಕೌತಾಳ, ತಿಪ್ಪಣ್ಣ ಮಜ್ಜಗಿ, ನಿಂಗಪ್ಪ ಸುತಗಟ್ಟಿ, ಭರತ್ ಬೊಮ್ಮಾಯಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ ಸೇರಿದಂತೆ ಬಿಜೆಪಿಯ ವಿವಿಧ ಮಂಡಳದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ನೂತನ ಪಶು ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಸಚಿವ ಎಚ್.ಕೆ. ಪಾಟೀಲರಿಂದ ಶಂಕುಸ್ಥಾಪನೆ




■ ವಿಜಯಸಾಕ್ಷಿ ಸುದ್ದಿ, ಗದಗ

ಪಶು ಸಂಪತ್ತನ್ನು ಅಧಿಕಗೊಳಿಸಿ ಅದರಿಂದ ಆರ್ಥಿಕ ಸ್ವಾವಲಂಬಿಗಳಾಗಲು ಪಶು ಆಸ್ಪತ್ರೆ ಸಹಕಾರಿಯಾಗಲಿದೆ. ಈ ಭಾಗದ ಸಾರ್ವಜನಿಕರು ಹೆಚ್ಚು ಹೆಚ್ಚು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಜಿಲ್ಲಾ ಪಂಚಾಯಿತಿ, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಪಶು ಆಸ್ಪತ್ರೆ ಬೆಟಗೇರಿ ಸಂಸ್ಥೆಯಲ್ಲಿ ನೂತನ ಕಟ್ಟಡದ ಶಂಕುಸ್ಥಾಪನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ಬೆಂಗಳೂರು ಕೆಎಂಎಫ್‌ನಲ್ಲಿ ಹೆಚ್ಚು ಹಾಲು ಉತ್ಪಾದನೆಯಾಗುತ್ತದೆ. ನಮ್ಮ ಗದಗ-ಬೆಟಗೇರಿಯಲ್ಲಿ ನೂತನ ಕಟ್ಟಡದ ಭೂಮಿಪೂಜೆಯಾಗಿರುವುದು ರೈತರಿಗೆ ಭರವಸೆ ಮೂಡಿಸಿದೆ. ಪಶುಪಾಲನೆಯಲ್ಲಿ ಮತ್ತು ಹಾಲು ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರದಿಂದ ಸಹಾಯ-ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಲಕ್ಷ್ಮವ್ವ ಭಜಂತ್ರಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಡಾ. ಎಚ್.ಬಿ. ಹುಲಗನ್ನವರ, ಡಾ. ಎಚ್.ವೈ. ಹೊನ್ನಿ ನಾಯ್ಕರ್, ಡಾ. ಹೀರಲಾಲ ಎನ್.ಜನಗಿ ಉಪಸ್ಥಿತರಿದ್ದರು.

## ಸಚಿವ ಎಚ್.ಕೆ. ಪಾಟೀಲರಿಂದ ಶಾಲಾ ಕೊಠಡಿ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2022-23ನೇ ಸಾಲಿನ ವಿಶೇಷ ಅನುದಾನ ಶಾಲಾ ಕೊಠಡಿ ಯೋಜನೆಯಡಿಯಲ್ಲಿ ಅಂದಾಜು ಮೊತ್ತ 41.70 ಲಕ್ಷ ರೂಗಳಲ್ಲಿ ನಿರ್ಮಿಸಲಾದ ಮುಳಗುಂದದ ದಾವಲಮಲೀಕ್ ಪಹಾಡದ ಸರಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ನೂತನ 4 ಕೊಠಡಿಗಳ ಕಟ್ಟಡವನ್ನು ಶನಿವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಶಾಲಾ ಶಿಕ್ಷಕ ವೃಂದದವರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಹಾಜರಿದ್ದರು.



### ಸೌತ್ ಕೊರಿಯಾದ HWPL ಪ್ರತಿನಿಧಿಗಳಿಂದ ಕಾನೂನು ಸಚಿವರೊಂದಿಗೆ ಶಾಂತಿ ಸಂವಾದ

## ಭಾರತವು ವಿಶ್ವಕ್ಕೆ ದಾರಿದೀಪವಾಗಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸೌತ್ ಕೋರಿಯಾದ ವಿಶ್ವ ಶಾಂತಿ ಸಂಸ್ಥೆ ಊಘಕಐ ಪ್ರತಿನಿಧಿಗಳು ವಿಶ್ವವಿದ್ಯಾಲಯದ ಭೇಟಿ ಅಂಗವಾಗಿ ಶನಿವಾರ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಡಾ. ಎಚ್.ಕೆ. ಪಾಟೀಲರನ್ನು ಭೇಟಿ ಮಾಡಿ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಊಘಕಐ ಗ್ಲೋಬಲ್ O3 ಶಾಖೆಯ ಶಾಖಾ ವ್ಯವಸ್ಥಾಪಕರಾದ ವೂನಮ್ ಕಿಮ್ ಹಾಗೂ ಅಂತಾರಾಷ್ಟ್ರೀಯ ಕಾನೂನು ಇಲಾಖೆಯ ನಿರ್ದೇಶಕರಾದ ಜೇಡೆನ್ ಲೀ ಅವರು ಸಂಸ್ಥೆಯ ಜಾಗತಿಕ ಶಾಂತಿ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಜೊತೆಗೆ, ಗದಗ ಜಿಲ್ಲೆಯನ್ನು 'ಶಾಂತಿ ಜಿಲ್ಲೆ' ಹಾಗೂ ಕರ್ನಾಟಕ ರಾಜ್ಯವನ್ನು 'ಶಾಂತಿ ರಾಜ್ಯ'ವಾಗಿ ಘೋಷಿಸಲು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಡಾ. ಎಚ್.ಕೆ. ಪಾಟೀಲ, ಗದಗ ಜಿಲ್ಲೆ ಬಹುಕಾಲದಿಂದ ಶಾಂತಿಯುತ ಜಿಲ್ಲೆ ಎಂಬ ಖ್ಯಾತಿ ಪಡೆದಿದೆ. ಕರ್ನಾಟಕವೂ ದೇಶದಲ್ಲೇ ಶಾಂತಿಯುತ ರಾಜ್ಯವಾಗಿ ಹೆಸರಾಗಿದೆ. ಊಘಕಐ ಸಂಸ್ಥೆಯ ಮನವಿಯನ್ನು ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರಲ್ಲದೆ, ಜನರು ಶಾಂತಿ ಮತ್ತು ನೆಮ್ಮದಿಯಿಂದ ಬದುಕಲು ವಿಶ್ವ ಶಾಂತಿ ಅತ್ಯವಶ್ಯಕ. ಭಾರತವು ಅಹಿಂಸಾ ತತ್ವದ ಮೂಲಕ ವಿಶ್ವಕ್ಕೆ ದಾರಿದೀಪವಾಗಿದ್ದು, ಮಹಾತ್ಮ ಗಾಂಧೀಜಿಯವರ ತತ್ವವನ್ನು ಇತರ ರಾಷ್ಟ್ರಗಳು ಅನುಸರಿಸಬೇಕು ಎಂದು ತಿಳಿಸಿದರು.

ಈ ಸಂವಾದದಲ್ಲಿ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಾ. ಸುರೇಶ ವಿ.ನಾಡಗೌಡರ ಮತ್ತು ಪ್ರಾಧ್ಯಾಪಕರು, ವಿಶ್ವವಿದ್ಯಾಲಯದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೇಕರಿ ಅಂಗಡಿಯಲ್ಲಿ ಸಿಲಿಂಡರ್ ಸ್ಫೋಟ: ತಪ್ಪಿದ ದುರಂತ!

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಜಿಲ್ಲೆಯ ಸವದತ್ತಿ ತಾಲೂಕಿನ ಮುನವಳ್ಳಿ ಪಟ್ಟಣದಲ್ಲಿ ಸಿಲಿಂಡರ್ ಸ್ಫೋಟಗೊಂಡು ಬೇಕರಿ ಸುಟ್ಟು ಕರಕಲಾದ ಘಟನೆ ಜರುಗಿದೆ.

ಘಟನೆಯಿಂದ ಬೇಕರಿಯಲ್ಲಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಸಾಮಗ್ರಿ ಸುಟ್ಟು ಕರಕಲಾಗಿದೆ. ಹಾಸನ ಮೂಲದ ವಿರೂಪಾಕ್ಷ ಎಂಬುವವರಿಗೆ ಸೇರಿದ ಬೇಕರಿ ಇದಾಗಿದೆ. ಶನಿವಾರ ಎಂದಿನಂತೆ ಬೇಕರಿಯಲ್ಲಿ ಕೆಲಸ ಮಾಡುವ ವೇಳೆ ಸಿಲಿಂಡರ್ ಸ್ಫೋಟಗೊಂಡಿದೆ. ಅದೃಷ್ಟವಶಾತ್ ಅಲ್ಲಿದ್ದ ಕೆಲಸಗಾರರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕೂಡಲೇ ಸ್ಥಳಕ್ಕೆ ದೌಡಾಯಿಸಿ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ.

ಸವದತ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.



ಲಕ್ಷ್ಮೇಶ್ವರದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ನುಲಿಯ ಚಂದಯ್ಯನವರ ದಿನಾಚರಣೆ ಆಚರಿಸಲಾಯಿತು. ಮುಖ್ಯೋಪಾಧ್ಯಾಯ ಬಸವರಾಜ ಕುಂಬಾರ, ಶಿಕ್ಷಕಿ ಎಚ್.ಡಿ. ನಿಂಗರೆಡ್ಡಿ ನುಲಿಯ ಚಂದಯ್ಯನವರ ಕುರಿತು ಮಾತನಾಡಿದರು. ಶಿಕ್ಷಕರಾದ ಎಲ್.ಎ. ಬಣಕಾರ, ಆರ್.ಎಂ. ಶಿರಹಟ್ಟಿ, ಆರ್.ಕೆ. ಉಪನಾಳ, ನೇತ್ರಾವತಿ ಕುಂಬಾರ ಹಾಗೂ ವಿದ್ಯಾರ್ಥಿಗಳಿದ್ದರು.

### ಹುಣ್ಣಿಮೆ ಶ್ರಾವಣ ಪುರಾಣ ಪ್ರವಚನ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಎಂದಿಗೂ ಆತ್ಮ ವಿಶ್ವಾಸ ಕಳೆದುಕೊಳ್ಳಬಾರದು

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ವಯಸ್ಸು ಇದ್ದಾಗ ವಿದ್ಯೆ, ಶಕ್ತಿಯಿದ್ದಾಗ ಹಣ, ಸಂಸ್ಕಾರದಿಂದ ಜ್ಞಾನ ಸಂಪಾದಿಸಿಕೊಂಡು ಬಾಳಬೇಕು. ಹೇಳುವ ಜ್ಞಾನ, ಮಾಡುವ ಮನಸ್ಸೊಂದಿದ್ದರೆ ಸಾಕು ಸಕಲ ಕಾರ್ಯಗಳು ಸಿದ್ಧಿಸುತ್ತವೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಹುಣ್ಣಿಮೆ ಶ್ರಾವಣ ಪುರಾಣ ಪ್ರವಚನ ಸಮಾರಂಭದ ಸಾನ್ನಿಧ್ಯ ವಹಿಸಿ ಆದೇಶದಲ್ಲಿ ರಾಜ, ಸಮಾಜದಲ್ಲಿ ಗುರು, ಪರಿವಾರದಲ್ಲಿ ತಂದೆ, ಮನೆಯಲ್ಲಿ ಸ್ತ್ರೀ ಇವರು ಎಂದಿಗೂ ಸಾಧಾರಣ ವ್ಯಕ್ತಿಗಳಲ್ಲ. ಏಕೆಂದರೆ ಅಭಿವೃದ್ಧಿ ಮತ್ತು ವಿನಾಶ ಇವೆರಡೂ ಇವರ ಕೈಯಲ್ಲಿಯೇ ಇರುತ್ತವೆ. ಯಾವ ವಿಶ್ವಾಸ ಹೋದರೂ ಯೋಚಿಸಬೇಕಾಗಿಲ್ಲ. ಆದರೆ ಆತ್ಮ ವಿಶ್ವಾಸ ಕಳೆದುಕೊಳ್ಳಬಾರದು. ದೇಹದ ಅಂದ-ಚೆಂದ



ಸುಖದ ಸಂಪತ್ತು ಅನುಭವಿಸಬೇಕಾದರೆ ಕಷ್ಟದ ಅರಿವು ತಿಳಿದಿರಬೇಕಾಗುತ್ತದೆ. ಸಂಸ್ಕಾರ ಹೇಳಲು ಸನ್ಯಾಸ ಬೇಕಾಗಿಲ್ಲ. ಅನುಭಾವ ಹೇಳಲು ಪದವಿ ಬೇಕಾಗಿಲ್ಲ. ಸೇವೆ ಮಾಡಲು ಅಧಿಕಾರ ಅಂತಸ್ತು ಬೇಕಾಗಿಲ್ಲ. ಈ ಸುಂದರ ಜಗತ್ತು ದೇವರು ಸೃಷ್ಟಿಸಿದ ಆಟದ ಮೈದಾನವಿದ್ದಂತೆ. ನಿಯತ್ತಿನಿಂದ ಆಟ ಆಡಿದರೆ ಗೆಲುವು. ನೀತಿ ಮೀರಿ ನಡೆದರೆ ಸೋಲು ಖಚಿತ ಎಂಬುದನ್ನು ಮರೆಯಬಾರದು. ಜೀವನದಲ್ಲಿ ಆಶೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬಾಳಲಾಗದೆಂದು ನೀತಿ ಸಂಹಿತೆಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಪ್ರತಿಪಾದಿಸಿದ್ದಾರೆ ಎಂದು ಶ್ರೀಗಳು ತಿಳಿಸಿದರು.

ಮರೆಯಾದರೂ ಚಿಂತೆಯಿಲ್ಲ. ಆದರೆ ಮನಸ್ಸು ಮಲಿನಗೊಳ್ಳದೇ ಪರಿಶುದ್ಧವಾಗಿರಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ಬದುಕಿನ ಬಂಡಿ ಸುಗಮವಾಗಿ ಗುರಿ ತಲುಪಲು ಕೊಟ್ಟ ಚಿಂತನೆಗಳು ಸಕಲರಿಗೂ ಆಶಾಕಿರಣವಾಗಿವೆ ಎಂದರು.

ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಮಾಡಿದ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಸಾಮಾಜಿಕ ವ್ಯವಸ್ಥೆ ಬಹಳಷ್ಟು ಕಲುಷಿತಗೊಳ್ಳುತ್ತಿದೆ. ಸಂಸ್ಕಾರ ಮತ್ತು ಸಂಸ್ಕೃತಿಯ ಕೊರತೆ ಇದಕ್ಕೆಲ್ಲ ಕಾರಣವೆಂದರೆ ತಪ್ಪಾಗದು. ಕಿತ್ತು ತಂದಿದ್ದು ಹೊತ್ತು ಮುಳುಗುವವರೆಗೆ ಮಾತ್ರ ಇರುತ್ತದೆ. ನಿಯತ್ತಿನಿಂದ ದುಡಿದು ತಿನ್ನುವುದು ಜೀವನದ ಕೊನೆಯವರೆಗೆ ಇರುತ್ತದೆ ಎಂಬುದನ್ನು ಮರೆಯಬಾರದು.

ನೀರು ಎರೆದವರಿಗೂ ಕಡಿಯಬಂದವರಿಗೂ ಬೇಧ ಎಣಿಸದೇ ಮರ ಹಣ್ಣು-ನೆರಳು ನೀಡುತ್ತದೆ. ಉಪಕಾರ ಮಾಡಿದವರಿಗೆ ಪ್ರತ್ಯುಪಕಾರ ಮಾಡಲಾಗದಿದ್ದರೂ ಚಿಂತೆಯಿಲ್ಲ. ಆದರೆ ಕೆಡಕು ಬಯಸುವ ಬುದ್ಧಿ ಬರಬಾರದು ಎಂದರು. ಇದೇ ಸಂದರ್ಭದಲ್ಲಿ 'ಬಾಳಿಗೆ ಬೆಳಕು' ಕೃತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು. ಶ್ರಾವಣ ಧರ್ಮ ಸಮಾರಂಭದಲ್ಲಿ ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯರು, ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಕುಲಪತಿ ಸಿದ್ಧಲಿಂಗಯ್ಯ ಹಿರೇಮಠ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಶಿವಯೋಗ ಸಾಧಕರಿಂದ ಭಕ್ತಿ ಗೀತೆ ಜರುಗಿತು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು. ಬಾಳೆಹೊನ್ನೂರು ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆಯಿಂದ ಆಗಮಿಸಿದ ಸಹೋದರಿಯರು ಜಗದ್ಗುರುಗಳಿಗೆ ರಕ್ಷಾ ಬಂಧನ ಕಟ್ಟಿ ಗೌರವ ಸಲ್ಲಿಸಿದರು. ಬೆಳಿಗ್ಗೆ ಶ್ರೀ ಪೀಠದ ಎಲ್ಲ ದೈವಗಳಿಗೆ ಹುಣ್ಣಿಮೆ ಅಂಗವಾಗಿ ಪೂಜೆ, ಹೂವಿನ ಅಲಂಕಾರ ಮಾಡಲಾಗಿತ್ತು. ಲೋಕಕಲ್ಯಾಣಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳವರು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಆಶೀರ್ವದಿಸಿದರು. ಶಿಗ್ಗಾಂವಿ ತಾಲೂಕಿನ ಕಬನೂರ ಗ್ರಾಮಸ್ಥರು ಅನ್ನ ದಾಸೋಹ ನೆರವೇರಿಸಿದರು.

### ಕದಳಿಶ್ರೀ ಮಹಿಳಾ ವೇದಿಕೆಯಿಂದ ಅಮೃತ ಭೋಜನ ಜ್ಞಾನಸಿಂಚನ ಮಾಲಿಕೆ-5

## ಶಾಲೆಗಳು ಮಕ್ಕಳಲ್ಲಿ ಸಮಾನತೆ ಮೂಡಿಸುತ್ತವೆ



ಪ್ರಾಸ್ತಾವಿಕವಾಗಿ ಮಾತನಾಡಿದ ಕವಿತಾ ದಂಡಿನ, ಶ್ರಾವಣದಲ್ಲಿ ನಡೆಯುವ ಅಮೃತ ಭೋಜನ-ಜ್ಞಾನಸಿಂಚನ ಕಾರ್ಯಕ್ರಮ ಕಳೆದ 16 ವರ್ಷಗಳಿಂದ ನಿರಂತರವಾಗಿ ನಡೆದು ಬರುತ್ತಿದ್ದು, ಸರ್ಕಾರಿ ಶಾಲೆಗಳಿಗೆ ಸಮುದಾಯವು ಬಂದು ವಿದ್ಯಾರ್ಥಿಗಳಿಗೆ ಸಿಹಿ ಭೋಜನ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುತ್ತಿದೆ. ಕೋಟಿ ಕುಟುಂಬದ ತೋಂಟೇಶ, ಕೀರ್ತಿ, ಪ್ರಥಮ, ಸುಶೀಲಾ ಹಾಗೂ ಜಯಶ್ರೀ ಹಿರೇಮಠ ಇಂದಿನ ಕಾರ್ಯಕ್ರಮದ ಪ್ರಾಯೋಜಕರಾಗಿದ್ದಾರೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಶಾಲೆಗಳು ಮಕ್ಕಳಿಗೆ ಸಮಾನತೆ, ಗುಣಾತ್ಮಕತೆ ಹಾಗೂ ಶಿಸ್ತನ್ನು ಒಡಮೂಡಿಸುತ್ತವೆ. ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಪರಸ್ಪರ ಶ್ರದ್ಧೆ ಹಾಗೂ ಕಾಳಜಿ ಮುಖ್ಯ. ಮಕ್ಕಳು ಆರೋಗ್ಯಕರ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಚಿಂತಕಿ ಸುಶೀಲಾ ಕೋಟಿ ಹೇಳಿದರು.

ಅವರು ಇತ್ತೀಚೆಗೆ ಗದುಗಿನ ಸರ್ಕಾರಿ ಶಾಲೆ ನಂ.3ರಲ್ಲಿ ಗದಗ ಜಿಲ್ಲಾ ಶರಣೆ ಅಕ್ಕಮಹಾದೇವಿ ಕದಳಿಶ್ರೀ ಮಹಿಳಾ ವೇದಿಕೆಯಿಂದ ಜರುಗಿದ ಅಮೃತ ಭೋಜನ ಜ್ಞಾನಸಿಂಚನ ಮಾಲಿಕೆ-5ರ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದರು.

ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಮಾತನಾಡಿದ ಚಿಂತಕಿ ಜಯಶ್ರೀ ಹಿರೇಮಠ, ವಿದ್ಯಾರ್ಥಿಗಳು ಶಿಸ್ತು ಪಾಲಿಸಬೇಕು. ಓದುವ ಹವ್ಯಾಸ ರೂಢಿಸಿಕೊಂಡು ಬದುಕಿನಲ್ಲಿ ಶೈಕ್ಷಣಿಕ ಮುನ್ನಡೆ ಸಾಧಿಸಬೇಕು. ಕಳೆದ ದಿನಗಳು ಮತ್ತೆ ಬರುವುದಿಲ್ಲ. ಮಕ್ಕಳು ಪ್ರತಿಯೊಂದು ಕ್ಷಣಗಳನ್ನು ಮೌಲ್ಯಯುತವಾಗಿ ಉಪಯೋಗಿಸಿಕೊಂಡು ವಿದ್ಯಾರ್ಥಿ ಜೀವನವನ್ನು ಪರಿಪೂರ್ಣಗೊಳಿಸಬೇಕು ಎಂದರು.

ಶಾಲಾ ಮುಖ್ಯೋಪಾಧ್ಯಾಯೆ ಪಿ.ಎಸ್. ಮಣ್ಣೂರ ಮಾತನಾಡಿ, ಸಮುದಾಯ ಸರ್ಕಾರಿ ಶಾಲೆಗಳಿಗೆ ಆಗಮಿಸಿ ಪ್ರೋತ್ಸಾಹ ನೀಡುವುದರೊಂದಿಗೆ ಮಕ್ಕಳಿಗೆ ಸಿಹಿ ಭೋಜನ ಹಾಗೂ ಕಲಿಕಾ ಸಾಮಗ್ರಿ ವಿತರಿಸಿ ಅವರೊಂದಿಗೆ ಕೆಲವು ಕ್ಷಣಗಳನ್ನು ಕಳೆದು ಮಕ್ಕಳಲ್ಲಿ ಉತ್ಸಾಹ ತುಂಬಿದ್ದಾರೆ. ಅವರಿಗೆ ಅಭಿನಂದನೆಗಳು ಎಂದರು.

ತನ್ವಿ ಹರ್ಲಾಪೂರಮಠ, ದೀಪಾ ಮೇಟಿ ಅವರಿಂದ ವಚನ ಪ್ರಾರ್ಥನೆ ಜರುಗಿತು. ಜಿ.ಕೆ. ಕಾಳೆ ಸ್ವಾಗತಿಸಿದರು. ಎಸ್.ಬಿ. ಬಾಗೂರ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಗಿರಿಜವ್ವ ಪಲ್ಲೇದ, ಲಕ್ಷ್ಮೀ ಹಿರೇಮಠ, ಜೇರಾಬಿ ಭಾವಿಕಟ್ಟಿ, ವಿಜಯಲಕ್ಷ್ಮೀ ಹಳ್ಳಿಕೇರಿ, ಜಯಮ್ಮ ಮೇಣಸಗಿ, ಮಂಜುಳಾ ಅನಂತಪುರ, ತೆಲಗಾವಿ, ಗೀತಾ ಪಲ್ಲೇದ, ಅಶ್ವಿನಿ ಹೆರಕಲ್, ನಿಂಗಮ್ಮ ಕೊಚಲಾಪೂರ ಮುಂತಾದವರು ಉಪಸ್ಥಿತರಿದ್ದರು.

### ಜಗದ್ಗುರು ವರವಿ ಮೌನೇಶ್ವರ ಯುವಕ ಮಂಡಳ ಅಸ್ತಿತ್ವಕ್ಕೆ

## ನೂತನ ಪದಾಧಿಕಾರಿಗಳ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶ್ರೀಕ್ಷೇತ್ರ ವರವಿ ಜಗದ್ಗುರು ಮೌನೇಶ್ವರ ದೇವಸ್ಥಾನದಲ್ಲಿ ಇತ್ತೀಚೆಗೆ ನಡೆದ ಸಭೆಯಲ್ಲಿ ಸವದತ್ತಿಯ ಶ್ರೀ ಸೋಮಲಿಂಗಯ್ಯ ಒಡೆಯರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಜಗದ್ಗುರು ವರವಿ ಮೌನೇಶ್ವರ ಯುವಕ ಮಂಡಳ ಅಸ್ತಿತ್ವಕ್ಕೆ ಬಂದಿತು. ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುರುಂದ ಅಧ್ಯಕ್ಷತೆ ವಹಿಸಿದ್ದರು.

ಜಗದ್ಗುರು ವರವಿ ಮೌನೇಶ್ವರ ಯುವಕ ಮಂಡಳದ ಅಧ್ಯಕ್ಷರಾಗಿ ತರ್ಲಗಟ್ಟದ ಚಿದಾನಂದ ಆಚಾರ್ಯ, ಉಪಾಧ್ಯಕ್ಷರಾಗಿ ಹರ್ತಿಯ ಗಣೇಶ ಕಮ್ಮಾರ, ಮುದಾದಡಿ ರಮೇಶ ಎಂ.ಪಿ., ಗಣೇಶ ಜಿ.ಎನ್, ಪ್ರಧಾನ ಕಾರ್ಯದಶಿಯಾಗಿ ಧಾರವಾಡದ ಸಂತೋಷ ಜಿ.ಅರ್ಕಾಚಾರ್ಯ, ಸಹ ಕಾರ್ಯದರ್ಶಿಯಾಗಿ ವಿ. ಆನಂದಾಚಾರ್ಯ, ಸಂಘಟನಾ ಕಾರ್ಯದರ್ಶಿಯಾಗಿ ಕುರ್ತಕೋಟಿಯ ಅಶೋಕ ಬಡಿಗೇರ, ಸಂಚಾಲಕರಾಗಿ ಗದಗದ ಶಂಕರಾಚಾರ್ಯ ಪತ್ತಾರ, ಗದಗದ ಶ್ರೀಧರ ಪತ್ತಾರ, ಬೆಳಗಾವಿಯ ರಮೇಶ ಬಡಿಗೇರ, ಹಾವೇರಿಯ ಸತೀಶ ಕನವಳ್ಳಿ ಆಯ್ಕೆಯಾದರು.

ನೂತನ ಪದಾಧಿಕಾರಿಗಳನ್ನು ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುರುಂದ, ಟ್ರಸ್ಟಿಗಳಾದ ಕೊಟ್ರೇಶ ಆಚಾರ್ಯ, ನಿರಂಜನ ಬಡಿಗೇರ, ಚಂದ್ರಕಾಂತ ಸೋನಾರ, ನಾರಾಯಣಪ್ಪ ಸಿಂಗಟಾಲೂರ, ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ, ವಿಶ್ವಕರ್ಮ ಮಹಾಸಭಾ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ಬೆಟಗೇರಿ ಕಾಳಿಕಾ ದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ, ಸಮಾಜದ ಮುಖಂಡರಾದ ವಿಶ್ವನಾಥ ಯ.ಕಮ್ಮಾರ, ಮೌನೇಶ ಚಿ.ಬಡಿಗೇರ(ನರೇಗಲ್ಲ), ನಾಗರಾಜ ಕಮ್ಮಾರ, ಎಸ್.ಎನ್. ಬಡಿಗೇರ, ಮನೋಹರ ಕೆ., ಪೂರ್ವಾಚಾರ, ನರಸಪ್ಪ, ಗಣೇಶ ಕಮ್ಮಾರ, ಚಿದಾನಂದ ಶಿಲ್ಪಿ, ಅಶೋಕ ಬಡಿಗೇರ, ಶ್ರೀಧರ ಪತ್ತಾರ, ಸೇರಿದಂತೆ ಸಭೆಯಲ್ಲಿ ಉಪಸ್ಥಿತರಿದ್ದ ಪದಾಧಿಕಾರಿಗಳು, ಸದಸ್ಯರು, ಸಮಸ್ತ ವಿಶ್ವಕರ್ಮ ಸಮಾಜ ಬಾಂಧವರು ಅಭಿನಂದಿಸಿದರು. ವಿಶ್ವನಾಥ ಯ. ಕಮ್ಮಾರ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

## ಜನ್ಮದಿನದ ನಿಮಿತ್ತ ಸಾಧಕರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜನ್ಮದಿನದ ನಿಮಿತ್ತ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸುವ ಕಾರ್ಯಕ್ರಮ ಅನನ್ಯ ಮತ್ತು ಅರ್ಥ ಪೂರ್ಣವಾದುದು ಎಂದು ಗ್ಯಾರಂಟಿ ಯೋಜನೆ ತಾಲೂಕಾಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ಪಟ್ಟಣದ ವಸತಿಯುತ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯಲ್ಲಿ ಮುಖಂಡ ಅಲ್ಲಾಭಕ್ಷ ನದಾಫ್ ಅವರ ಜನ್ಮ ದಿನದ ನಿಮಿತ್ತ ಹಮ್ಮಿಕೊಂಡಿದ್ದ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೃಷ್ಟಿಕರ್ತನ ಸನ್ನಿಧಿಯಲ್ಲಿ ಹುಟ್ಟು ಆಕಸ್ಮಿಕ, ಸಾವು ಖಚಿತ. ಅದನ್ನು ಮೀರಲು ಇಂದಿಗೂ ಯಾರಿಗೂ ಸಾಧ್ಯವಾಗಿಲ್ಲ. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಸನ್ಮಾನ ಮಾಡಿರುವುದು ಸಂತೋಷವೆನಿಸಿದೆ. ಈ ಕಾರ್ಯ ಬೇರೆಯವರಿಗೆ ಮಾದರಿಯಾಗಿದೆ. ಅಲ್ಲಾಭಕ್ಷ ಅವರ ಜನ್ಮ ದಿನದವನ್ನು ಸಾರ್ಥಕಗೊಳಿಸಿಕೊಳ್ಳಲು ತನ್ನ ಹುಟ್ಟುಹಬ್ಬವನ್ನು ಮನೆಯಲ್ಲಿ ಆಚರಿಸದೆ ಮತ್ತೊಬ್ಬರನ್ನು ಸನ್ಮಾನಿಸುವ ಮೂಲಕ ಸಮಾಜ ಸೇವೆಗೆ ಎತ್ತಿದ ಕೈಯೆಂದು ಸಾಬೀತುಪಡಿಸಿರುವುದು ಸಂತಸ ತಂದಿದೆ ಎಂದರು.

ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ, ಡಾ. ಕೆ.ಬಿ. ಧನ್ನೂರ, ಎಂ.ಎಸ್. ಧಡೇಸೂರಮಠ, ಸಿ.ವಿ. ವಂಕಲಕುಂಟಿ, ಶರಣಪ್ಪ ಬೆಟಗೇರಿ, ಶಿವನಗೌಡ ಪಾಟೀಲ, ರಾಚಯ್ಯ ಮಾಲಗಿತ್ತಿಮಠ, ವಿ.ಎನ್. ಪಾಟೀಲ, ಅಲ್ಲಾಭಕ್ಷ ನದಾಫ್, ಮೈಲಾರಪ್ಪ ಚಳ್ಳಮರದ, ಶಿವು ಕೊಪ್ಪದ, ನಿಂಗನಗೌಡ ಲಕ್ಕನಗೌಡ್ರ, ಹನಮಂತ ದ್ವಾಸಲ್, ಬಸವರಾಜ ಹತ್ತಿಕಟಿಗಿ ಸೇರಿದಂತೆ ಕಿವುಡ ಮಕ್ಕಳ ವಸತಿ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘ ಗದಗ ವತಿಯಿಂದ 23-08-2025ರಂದು ಜರುಗಲಿರುವ ಲಿಂಗರಾಜ ದೇಸಾಯಿಯವರ ಪುಣ್ಯತಿಥಿ ಕಾರ್ಯಕ್ರಮದಲ್ಲಿ, 2024ರ ಮಾರ್ಚ್ ತಿಂಗಳಲ್ಲಿ 10ನೇ ತರಗತಿ ಮತ್ತು 12ನೇ ತರಗತಿಯಲ್ಲಿ ಶೇ.85ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದ ಕುಡುಒಕ್ಕಲಿಗ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ 18-08-2025 ಆಗಿದ್ದು, ಮಾಲತೇಶ ನಡುವಿನಮನಿ -8496817174, ಪ್ರಶಾಂತ ಕನಾಜ -9741871213 ಇವರಿಗೆ ಅಂಕಪಟ್ಟಿ ಮತ್ತು ಆಧಾರ್ ಕಾರ್ಡ್‌ನ್ನು ಕಳಿಸಬೇಕೆಂದು ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘದ ಕಾರ್ಯದರ್ಶಿ ಶರಣಪ್ಪ ದಿಡ್ಡಿಮನಿ ವಿನಂತಿಸಿದ್ದಾರೆ.

## ಪೂರ್ವಭಾವಿ ಸಭೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ ವತಿಯಿಂದ ಆಗಸ್ಟ್ 24ರಂದು ಜರಗುವ ಜಿಲ್ಲಾ ಸಮ್ಮೇಳನದ ಪ್ರಯುಕ್ತ ಶರಣ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರ ಸಭೆಯನ್ನು ಆ.10ರಂದು 3.30 ಗಂಟೆಗೆ ಗದಗ ತೋಂಟದಾರ್ಯ ಮಠದ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಕರೆಯಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎ. ಬಳಿಗೇರ ವಹಿಸುವರು. ಸಭೆಯಲ್ಲಿ ಗದಗ, ಮುಂಡರಗಿ, ನರಗುಂದ, ಗಜೇಂದ್ರಗಡ, ರೋಣ, ಲಕ್ಷ್ಮೇಶ್ವರ, ಶಿರಹಟ್ಟಿ ತಾಲೂಕಿನ ಅಧ್ಯಕ್ಷರು ಹಾಗೂ ಆಜೀವ ಸದಸ್ಯರು ಭಾಗವಹಿಸುವರು ಎಂದು ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಪ್ರಕಟಣೆಗೆ ತಿಳಿಸಿದ್ದಾರೆ.



ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯದಲ್ಲಿ ಶಿವಶರಣ ಶ್ರೀ ನುಲಿಯ ಚಂದಯ್ಯನವರ ಜಯಂತಿಯನ್ನು ಆಚರಿಸಲಾಯಿತು. ಪೌರಾಯುಕ್ತರಾದ ರಾಜಾರಾಮ ಪವಾರ, ಎ.ಎನ್. ಪುಣೇಕರ, ರಾಜು ಬಾಕಳೆ, ಡಿ.ಹೆಚ್. ಸೀತಿಮನಿ, ಶಬಾನಾ ದಳವಾಯಿ, ರೇಣುಕಾ ಭಾಟ್, ವಿಶ್ವನಾಥ ತಿಮ್ಮಾಪುರ, ರಫೀಕ್ ಕುರ್ತಕೋಟಿ ಸೇರಿದಂತೆ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

### ಅಡವೀಂದ್ರ ಸ್ವಾಮಿ ಮಠದಲ್ಲಿ ಮಾಸಿಕ ಶಿವಾನುಭವ 'ಶ್ರಾವಣ ಸಂಜೆ'

## ಆಧ್ಯಾತ್ಮಿಕತೆಯಿಂದ ನೆಮ್ಮದಿಯ ಬದುಕು



ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಮಾತನಾಡಿ, ವ್ಯಕ್ತಿಗಳು ಶಕ್ತಿಗಳಾಗಲು ಧರ್ಮದ ರಕ್ಷಣೆ ಬೇಕು.

ಧರ್ಮವು ನಮ್ಮನ್ನು ಸುಜ್ಞಾನಿಗಳನ್ನಾಗಿ ಮಾಡುತ್ತದೆ. ಧರ್ಮದ ಮಾರ್ಗದಲ್ಲಿ ನಡೆದರೆ ಎಂದಿಗೂ ಸೋಲಿಲ್ಲ. ಮನುಷ್ಯನಿಗೂ ಧರ್ಮಕ್ಕೂ ಅವಿನಾಭಾವ ಸಂಬಂಧವಿದ್ದು, ಮಠಗಳು ಸೇತುವೆಗಳಾಗಿ ಭಕ್ತರನ್ನು ಸನ್ಮಾರ್ಗದತ್ತ ಮುನ್ನಡೆಸುತ್ತದೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರಾವಣ ಮಾಸವು ಸಂಭ್ರಮ-ಸಡಗರದ ಕಾಲ. ಮನುಷ್ಯನು ಆಧ್ಯಾತ್ಮಿಕವಾಗಿ ಚಿಂತನೆಗೊಂಡು ಮನ ಹಾಗೂ ಮನಸ್ಸನ್ನು ದೇವರ ಧ್ಯಾನದಲ್ಲಿ ಕಳೆಯುವ ಒಳ್ಳೆಯ ಸಮಯವಾಗಿದ್ದು, ಜೀವನದ ನೆಮ್ಮದಿಗೆ, ಸಮಸ್ಯೆಗಳಿಗೆ ಆಧ್ಯಾತ್ಮವೊಂದೇ ಪರಿಹಾರ ಒದಗಿಸಬಲ್ಲದು ಎಂದು ನಿವೃತ್ತ ವಿಜ್ಞಾನ ಶಿಕ್ಷಕ ರಾಮಚಂದ್ರ ಮೋನೆ ಹೇಳಿದರು.

ಅವರು ಗದುಗಿನ ಅಡವೀಂದ್ರ ಸ್ವಾಮಿ ಮಠದಲ್ಲಿ ನಡೆದ 338ನೇ ಮಾಸಿಕ ಶಿವಾನುಭವ 'ಶ್ರಾವಣ ಸಂಜೆ' ಗೋಷ್ಠಿಯಲ್ಲಿ 'ಆಧ್ಯಾತ್ಮಿಕತೆ ಹಾಗೂ ನಾವು' ವಿಷಯವಾಗಿ ಮಾತನಾಡಿದರು.

ಆಧ್ಯಾತ್ಮ ಎಂದರೆ ನಮ್ಮನ್ನು ನಾವು ತಿಳಿದುಕೊಳ್ಳುವದು. ಮಾಡುವ ಕಾಯಕದಲ್ಲಿ ನಂಬಿಕೆ ಇಟ್ಟು ಅದನ್ನೇ ದೇವರೆಂದು ತಿಳಿದು ಮೌಲ್ಯಯುತವಾಗಿ ಜೀವನ ನಡೆಸಬೇಕು. ಜೀವನದ ಪ್ರತಿಯೊಂದು ಘಳಿಗೆನ್ನು ಅರ್ಥಪೂರ್ಣವಾಗಿ ಕಳೆಯುವಲ್ಲಿ ಆಧ್ಯಾತ್ಮ ನಮಗೆ ದಾರಿ ತೋರಿಸುತ್ತದೆ. ಪರಸ್ಪರ ಗೌರವ, ಸಹಕಾರ, ವಾತ್ಸಲ್ಯಗಳೆ ನಮ್ಮ ಜೊತೆಗಿರಬೇಕು. ಎಲ್ಲ ಧರ್ಮಗಳ ಸಾರವನ್ನು ತಿಳಿದು ಆಧ್ಯಾತ್ಮದ ಜ್ಯೋತಿ ಬೆಳಗಿದಾಗ ಸಮಾಜದಲ್ಲಿ ನಾವು ಸಲ್ಲಿಸುವ ಸೇವೆ ಗುರುತಿಸಲ್ಪಡುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರಾಚಾರ್ಯ ಜಿ.ವ್ಹಿ. ಹಂಪಣ್ಣವರ ಮಾತನಾಡಿ, ಮಠ-ಮಾನ್ಯಗಳು ಧಾರ್ಮಿಕ ನೆಲೆಗಟ್ಟನ್ನು ಕಟ್ಟಿಕೊಡುವ ಶ್ರದ್ಧಾ ಕೇಂದ್ರಗಳು. ಗದಗ ಪರಿಸರದಲ್ಲಿ ಅಡವೀಂದ್ರ ಮಠವು ಮಾಸಿಕ ಶಿವಾನುಭವದ ಮೂಲಕ ಭಕ್ತರಲ್ಲಿ ಧರ್ಮ ಜಾಗೃತಿ ಮಾಡುತ್ತಿದೆ ಎಂದರು.

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಿಂದ 'ವಾಣಿಜ್ಯ ರತ್ನ' ಪ್ರಶಸ್ತಿ ಪಡೆದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹಾಗೂ ಪ್ರಾಚಾರ್ಯ ಜಿ.ವ್ಹಿ. ಹಂಪಣ್ಣವರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಶಿವಾನುಭ ಸಮಿತಿಯ ಅಧ್ಯಕ್ಷ ಡಾ. ಎಸ್. ಕೆ. ನಾಲತ್ವಾಡಮಠ ವಹಿಸಿದ್ದರು. ರತ್ನಮ್ಮ ಮಂಟೂರಮಠ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಸಿದ್ದೇಶ ಜವಳಿ ಸ್ವಾಗತಿಸಿದರು. ಪ್ರಕಾಶ ಬಂಡಿ ನಿರೂಪಿಸಿ ವಂದಿಸಿದರು. ವೇದಿಕೆಯ ಮೇಲೆ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಿ.ಬಿ. ತೋಟಗೇರ, ಕಾರ್ಯದರ್ಶಿ ಪ್ರೊ. ಬಿ.ಬಿ. ಪಾಟೀಲ, ಸಾಂಸ್ಕೃತಿಕ ಕಾರ್ಯದರ್ಶಿ ವಿನಾಯಕ ಸಜ್ಜನ, ಕೋಶಾಧ್ಯಕ್ಷ ಯು.ಆರ್. ಭೂಸನೂರಮಠ ಉಪಸ್ಥಿತರಿದ್ದರು.

ಭಕ್ತಿ ಸೇವೆಯನ್ನು ಪಿ.ಸಿ. ಪುರಾಣಿಕಮಠ, ಶರಣಬಸಪ್ಪ ಗುಡಿಮನಿ, ರವೀಂದ್ರ ಮಾಶಾಳ, ಎಸ್.ಎಂ. ಮಾಶಾಳ ವಹಿಸಿದ್ದರು.

# ಭಾರೀ ಮಳೆಗೆ ಮನೆಯ ಗೋಡೆ ಕುಸಿತ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶುಕ್ರವಾರ ಸಂಜೆ ಸುರಿದ ಭಾರೀ ಮಳೆಯಿಂದಾಗಿ ಇಲ್ಲಿಯ ಹತ್ತಾರು ಮಣ್ಣಿನ ಮನೆಗಳ ಗೋಡೆಗಳು ಕುಸಿದು ಲಕ್ಷಾಂತರ ರೂ ಹಾನಿಯಾಗಿದೆ.

ಬಜಾರ ರಸ್ತೆಯ ಮನೆಯ ಮುಂದೆ ಇಟ್ಟಿದ್ದ ಬೈಕ್ ಮೇಲೆ ಮಣ್ಣಿನ ಮನೆಯ ಗೋಡೆ ಬಿದ್ದು ಹಾನಿಗೊಳಗಾಗಿದೆ. ಗೊಲ್ಲರ ಓಣಿಯಲ್ಲಿ ನೇತ್ರಾವತಿ ಬೆಳ್ಳಿಗೌಡ್ರ ಎಂಬುವರ ಮನೆಯ ಸಂಪೂರ್ಣ ಮೇಲ್ಛಾವಣಿ ಹಾಗೂ ಗೋಡೆ ಕುಸಿದಿದೆ.

ಆರೋಪ: ಗೊಲ್ಲರ ಹಟ್ಟಿ ಯೋಜನೆಯಡಿಯಲ್ಲಿ ಮನೆ ನಿರ್ಮಾಣಕ್ಕೆ ನನ್ನ ಹೆಸರು ಆಯ್ಕೆಯಾದರೂ ಸಹ ಈವರೆಗೂ ಸಂಬಂಧಿಸಿದ ಅಧಿಕಾರಿಗಳು ಮನೆ ನಿರ್ಮಾಣದ ಆದೇಶಪತ್ರವನ್ನು ನೀಡಿಲ್ಲ. ಹೀಗಾಗಿ ನಮಗೆ ಮನೆಯಿಲ್ಲದೇ ಕೊರಗುವಂತಾಗಿದೆ ಎಂದು ನೇತ್ರಾವತಿ ಬೆಳ್ಳಿಗೌಡ್ರ ಆರೋಪಿಸಿದ್ದಾರೆ.

ಶ್ರೀ ನುಲಿಯ ಚಂದಯ್ಯ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪರಿಸರವಾದಿ ಗೋಣಿಬಸಪ್ಪ ಕೊರ್ಲಹಳ್ಳಿ

# ಜಾತಿ ರಹಿತ ಪ್ರಜಾಪ್ರಭುತ್ವ ವ್ಯವಸ್ಥೆಯ ಬೆಳಕು

■ವಿಜಯಸಾಕ್ಷಿ ಸುದ್ದಿ, ಡಂಬಳ

12ನೇ ಶತಮಾನದ ಕಾಂತ್ರಿಯಲ್ಲಿ ಕಾಯಕ, ದಾಸೋಹದ ಮೂಲಕ ಸಮಾಜಕ್ಕೆ ಬೆಳಕು ನೀಡಿದ ಶರಣ ನುಲಿಯ ಚಂದಯ್ಯನವರು ಬಸವಣ್ಣನವರ ಅನುಭವ ಮಂಟಪದಲ್ಲಿ ಜಾತಿ ರಹಿತ ಪ್ರಜಾಪ್ರಭುತ್ವ ವ್ಯವಸ್ಥೆ ಪರಿಕಲ್ಪನೆ ಸಾಕಾರಕ್ಕೆ ಅವರ ಪಾತ್ರ ಮುಖ್ಯವಾಗಿತ್ತು ಎಂದು ಪರಿಸರವಾದಿ ಗೋಣಿಬಸಪ್ಪ ಕೊರ್ಲಹಳ್ಳಿ ಹೇಳಿದರು.

ಡಂಬಳ ಗ್ರಾಮದ ಕೊರಚ ಬಡಾವಣೆಯಲ್ಲಿ ಅಖಿಲ ಕರ್ನಾಟಕ ಕೊರಚ ಮಹಾ ಸಂಘ ಬೆಂಗಳೂರು ಮತ್ತು ಡಂಬಳ ಕೊರಚ ಸಮಾಜದ ಸಂಯುಕ್ತ ಆಶ್ರಯದಲ್ಲಿ ಶ್ರೀ ನುಲಿಯ ಚಂದಯ್ಯ ಜಯಂತ್ಯುತ್ಸವ ಹಾಗೂ ನೂತನ ಅಖಿಲ ಕರ್ನಾಟಕ ಕೊರಚ ಮಹಾಸಂಘದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ಡಂಬಳ ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಸಾನ್ನಿಧ್ಯ ವಹಿಸಿ ಮಾತನಾಡಿ, ಶಿವ ಶರಣ ನುಲಿಯ ಚಂದಯ್ಯ ಸಮ-ಸಮಾಜದ ನಿರ್ಮಾಣ ಮಾಡಲು ಸಾಮಾಜಿಕ ಪಿಡುಗು ಹಾಗೂ ಮೂಢನಂಬಿಕೆ ವಿರುದ್ಧ ಜನರಿಗೆ ಅರಿವು ಮೂಡಿಸಿದ ಶ್ರೇಷ್ಠ ವಚನಕಾರರು. ಗ್ರಾಮದಲ್ಲಿರುವ ಕೊರಚ ಸಮಾಜದ ಮಹಿಳೆಯರು, ಪುರುಷರು ಕಾಯಕದಲ್ಲಿ ತೊಡಗಿರುವವರಾಗಿದ್ದೀರಿ ಎಂದು ಹೇಳಿದರು.

ಗ್ರಾ.ಪಂ ಸದಸ್ಯ ಮರಿಯಪ್ಪ ಸಿದ್ದಣ್ಣವರ, ಪತ್ರಕರ್ತ ಲಕ್ಷ್ಮಣ ದೊಡ್ಡಮನಿ ಮಾತನಾಡಿ, ಕೊರಚ ಸಮಾಜ ಪ್ರತಿಯೊಂದು ರಂಗದಲ್ಲಿಯೂ ಹಿಂದೆಯೇ ಉಳಿದಿರುವ ಸಮಾಜವಾಗಿದ್ದು, ನಿಮ್ಮ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಂಘಟನಾತ್ಮಕವಾಗಿ ತೊಡಗಿಸಿಕೊಂಡಾಗ ಮಾತ್ರ ಸಾಧ್ಯ ಎಂದು ಹೇಳಿದರು.

ಸಿಐಟಿಯು ಅಧ್ಯಕ್ಷೆ ಸುಶೀಲಾ ಚಲವಾದಿ, ಹುಸೇನಮ್ಮ ಕೊಪ್ಪಳ ಮಾತನಾಡಿ, ಕಾಯಕ ದಾಸೋಹದ ಮೂಲಕ ಸಮಾಜಕ್ಕೆ ಬೆಳಕು ನೀಡಿದ ಶರಣರು ನುಲಿಯ ಚಂದಯ್ಯನವರು ಎಂದರು. ಶ್ರೀ ನುಲಿಯ ಚಂದಯ್ಯ ಜಯಂತ್ಯುತ್ಸವದ ಅಂಗವಾಗಿ ಅವರ ಭಾವಚಿತ್ರದ ಮೆರವಣಿಗೆಯು ವಾದ್ಯ ಮೇಳಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಿತು.



ಕೊರಚ ಮಹಾ ಸಂಘದ ಗದಗ ಜಿಲ್ಲಾಧ್ಯಕ್ಷ ಡಿ. ಆಂಜನೇಯ ಮಾತನಾಡಿ, ಧರ್ಮ ಮತ್ತು ಕಾಯಕ ಇವೆರಡೂ ನಮ್ಮ ಕೈ ಹಿಡಿಯುತ್ತವೆ. ಶ್ರದ್ಧಾ ಮನೋಭಾವನೆಯಿಂದ ಕೆಲಸ ಮಾಡಿದರೆ ಯಶಸ್ಸು ಲಭಿಸುತ್ತದೆ. ಇದೇ ಸಂದೇಶವನ್ನು ಸಮಾಜಕ್ಕೆ ಸಾರಿದ ಕೀರ್ತಿ ನುಲಿಯ ಚಂದಯ್ಯನವರಿಗೆ ಸಲ್ಲುತ್ತದೆ. ಸರ್ಕಾರಿ ಸೌಲಭ್ಯಗಳನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಲು ಮುಂದಾಗಬೇಕು. ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಶ್ರೀ ನುಲಿಯ ಚಂದಯ್ಯ ಅವರ ತತ್ವ- ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎ.ಎಸ್.ಐ ಎನ್.ಡಿ. ತಹಸೀಲ್ದಾರ, ಪತ್ರಕರ್ತ ರಿಯಾಜ ದೊಡ್ಡಮನಿ, ಮೈಲಾರಪ್ಪ ಕೊರಚ, ಶಿವಪ್ಪ ಕೊರಚ, ದೊಡ್ಡಹನಮಪ್ಪ ಕೊರಚ, ಸಣ್ಣಮಾರಗೆಪ್ಪ ಕೊರಚ, ಹನಮಪ್ಪ ಕೊರಚ, ಗಂಗಪ್ಪ ಕೊರಚ, ಹನುಮಂತ ಕೊರಚ, ಶಿವಪ್ಪ, ಮಲಕಪ್ಪ ಕೊರಚ, ಹನಮವ್ವ ಕೊರಚ, ಅಧ್ಯಕ್ಷ ದ್ಯಾಮಣ್ಣ ಕೊರಚ, ಉಪಾಧ್ಯಕ್ಷ ರಾಮಪ್ಪ ಕೊರಚ, ಪ್ರಧಾನ ಕಾರ್ಯದರ್ಶಿ ದೊಡ್ಡಯಲ್ಲಪ್ಪ ಕೊರಚ, ಖಜಾಂಜಿ ಹನಮಪ್ಪ, ಮಹಿಳಾ ಅಧ್ಯಕ್ಷೆ ಹನಮವ್ವ ಕೊರಚ, ಉಪಾಧ್ಯಕ್ಷೆ ಗಾಳೇವ್ವ ಕೊರಚ, ಪ್ರಧಾನ ಕಾರ್ಯದರ್ಶಿ ಕೆಂಚವ್ವ, ಖಜಾಂಚಿ ಅನಿತಾ, ಸಂಘಟನಾ ಕಾರ್ಯದರ್ಶಿಗಳು, ಸಮಿತಿಯ ಸರ್ವ ಸದಸ್ಯರು ಇದ್ದರು.

ಮೃಂಜಯ್ಯ ಹಿರೇಮಠ ಮತ್ತು ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಶಿಕ್ಷಕ ಆರ್.ಜಿ. ಕೊರ್ಲಹಳ್ಳಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ದೆಹಲಿ| ರಣಭೀಕರ ಮಳೆ: ಕುಸಿದ ಗೋಡೆ, ಇಬ್ಬರು ಮಕ್ಕಳು ಸೇರಿ 7 ಮಂದಿ ದಾರುಣ ಸಾವು!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯ ಜೈತ್‌ಪುರದ ಹರಿನಗರದಲ್ಲಿ ಜೋರು ಮಳೆಗೆ ಕಾಂಪೌಂಡ್ ಗೋಡೆ ಕುಸಿದು ಇಬ್ಬರು ಮಕ್ಕಳು ಸೇರಿ 7 ಮಂದಿ ಸಾವನ್ನಪ್ಪಿರುವ ಘಟನೆ ಜರುಗಿದೆ.

ಹಲವಾರು ಗುಜರಿ ವ್ಯಾಪಾರಿಗಳು ನಗರದ ಹಳೆಯ ದೇವಾಲಯ ಒಂದರ ಬಳಿಯ ಕೊಳಗೇರಿ ಪ್ರದೇಶದಲ್ಲಿ ವಾಸಿಸುತ್ತಿದ್ದರು. ಈ ಪ್ರದೇಶದಲ್ಲಿದ್ದ ಗೋಡೆ ಭಾರೀ ಮಳೆಯ ಹೊಡೆತಕ್ಕೆ ಹಠಾತ್ ಕುಸಿದಿದೆ. ಅವಶೇಷಗಳ ಅಡಿ 8 ಮಂದಿ ಸಿಲುಕಿದ್ದರು. ಅವರನ್ನು ರಕ್ಷಿಸಿ ಆಸ್ಪತ್ರೆಗೆ ಸಾಗಿಸಲಾಯಿತು, ಆದರೆ ಗಂಭೀರವಾಗಿ ಗಾಯಗೊಂಡಿದ್ದ 7 ಮಂದಿ ಸಾವನ್ನಪ್ಪಿದರು. ಮತ್ತೆ ಅಂತಹ ಘಟನೆಗಳು ಸಂಭವಿಸದಂತೆ ಈ ಜಾಗದಿಂದ ಜನರನ್ನು ಸ್ಥಳಾಂತರಿಸಿದ್ದೇವೆ ಎಂದು ಡಿಸಿಪಿ ಐಶ್ವರ್ಯ ಶರ್ಮಾ ತಿಳಿಸಿದ್ದಾರೆ.

ಇನ್ನೂ ಶುಕ್ರವಾರ ತಡರಾತ್ರಿಯಿಂದ ದೆಹಲಿಯಲ್ಲಿ ತೀವ್ರ ಮಳೆಯಾಗುತ್ತಿದೆ. ಶನಿವಾರ ಕೂಡ ಭಾರೀ ಮಳೆ ಆಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

# ಯಜ್ಞೋಪವೀತ ಧಾರಣೆಯಿಂದ ತಪಃಶಕ್ತಿಯ ಹೆಚ್ಚಳ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯಜ್ಞೋಪವೀತವು ಪರಮ ಪವಿತ್ರವಾದದ್ದು, ಪ್ರಜಾಪತಿಗಿಂತಲೂ ಮೊದಲೇ ಉತ್ಪನ್ನಗೊಂಡಿದ್ದು, ಆಯುಷ್ಯವನ್ನು ಹೆಚ್ಚಿಸುವಂತದ್ದು, ಮನುಷ್ಯನನ್ನು ಶುಭ್ರ ಮಾಡುವಂತದ್ದು, ಯಜ್ಞೋಪವೀತ ನಮ್ಮ ಬಲ ಹಾಗೂ ತೇಜಸ್ಸನ್ನು ಹೆಚ್ಚಿಸುವಂತದ್ದು ಎಂದು ದತ್ತಾತ್ರೇಯ ದೇವಸ್ಥಾನದ ಅರ್ಚಕ ವೇ. ಮೂ. ಶ್ರೀವಲ್ಲಭಶಾಸ್ತ್ರಿ ಸದರಜೋಶಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಶನಿವಾರ ಯಜ್ಞೋಪವೀತ ಧಾರಣೆ ಹಾಗೂ ಹೋಮದ ನೇತೃತ್ವ ವಹಿಸಿ ಮಾತನಾಡಿದರು. ಯಜ್ಞೋಪವೀತ ಧಾರಣೆಗೆ ನಮ್ಮ ಸಂಸ್ಕೃತಿಯಲ್ಲಿ ವಿಶೇಷ ಮಹತ್ವವಿದೆ. ಅಂಗಡಿಯಿಂದ ತಂದ ಜನಿವಾರ ಸುಮ್ಮನೆ ಹಾಕಿಕೊಳ್ಳಬಾರದು. ಅದಕ್ಕೆ ಸಂಸ್ಕಾರ ಮಾಡಿ ಯಜ್ಞೋಪವೀತಾಭಿಮಾನಿ ದೇವತೆಗಳನ್ನು ಪೂಜಿಸಿ, ವೇದವ್ಯಾಸ ದೇವರಿಗೆ ಸಮರ್ಪಿಸಿ ಶ್ರದ್ಧಾ-ಭಕ್ತಿಯಿಂದ ಧರಿಸಬೇಕು. ಯಜ್ಞೋಪವೀತವನ್ನು ಧರಿಸಿದ ವ್ಯಕ್ತಿ ಅನೇಕ ನಿಯಮಗಳನ್ನು ಪಾಲಿಸಬೇಕಾಗುತ್ತದೆ. ಒಂದು ಸಲ ಜನಿವಾರವನ್ನು ಧರಿಸಿದ ಮೇಲೆ ಯಾವುದೇ ಕಾರಣಕ್ಕೂ ಜನಿವಾರವನ್ನು ಧರಿಸದೇ ಬಿಡುವಂತಿಲ್ಲ. ಯಜ್ಞೋಪವೀತ ಅವನ ತಪಃಶಕ್ತಿಯನ್ನು ಹೆಚ್ಚಿಸುತ್ತದೆ ಎಂದರು.

ಅರುಣ ಕುಲಕರ್ಣಿ(ಕುರಗಡ್ಡಿ) ಮಾತನಾಡಿ, ಯಜ್ಞೋಪವೀತವನ್ನು ಧರಿಸಿದ ವ್ಯಕ್ತಿ ನಿತ್ಯವೂ ತ್ರಿಕಾಲ ಸಂಧ್ಯಾವಂದನೆ ಮಾಡಬೇಕು. ಗಾಯತ್ರಿ ಮಂತ್ರದ ಉಚ್ಚಾರಣೆ ಮಾಡಬೇಕು. ಯಾವುದೋ ಕಾರಣಕ್ಕೆ ಜನಿವಾರ ತುಂಡಾದರೆ ತಕ್ಷಣವೆ ಅದನ್ನು ಬದಲಿಸಬೇಕು. ಅಶೌಚ ಕರ್ಮಾದಿ ಕಾರ್ಯಗಳಿಂದ ಮೈಲಿಗೆಯುಂಟಾದರೆ ಹಳೆಯದನ್ನು ತೆಗೆದು ಹೊಸ ಜನಿವಾರವನ್ನು ಧರಿಸಬೇಕಾದುದು ಯಜ್ಞೋಪವೀತ ಧರಿಸಿದವನ ಕರ್ತವ್ಯವಾಗಿದೆ ಎಂದರು. ಈವೇಳೆ ಅರುಣ ಗ್ರಾಮಪುರೋಹಿತ, ಆರ್.ಡಿ. ಕುಲಕರ್ಣಿ, ನಾಗೇಶಭಟ್ಟ ಗ್ರಾಮಪುರೋಹಿತ, ಆನಂದ ಕುಲಕರ್ಣಿ, ಅಜಿತ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಆನಂದ ಕಾಳೆ, ನಾಗರಾಜ ನಾಡಿಗೇರ, ರಾಮಕೃಷ್ಣ ಸದರಜೋಶಿ ಸೇರಿದಂತೆ ಬ್ರಹ್ಮ ಸಮಾಜದವರಿದ್ದರು.

ದಿಂಡೂರ ತಾಂಡಾ ಶಾಲೆಗೆ ದಾನಿಗಳಿಂದ ವಿವಿಧ ಪರಿಕರ, ವಿದ್ಯಾರ್ಥಿಗಳಿಗೆ ವಸ್ತ್ರ ವಿತರಣೆ

# ದಾನಿಗಳ ಕಾರ್ಯ ಪ್ರಶಂಸನೀಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಉನ್ನತ ಸ್ಥಾನಕ್ಕೇರಿದ ನಂತರ ಅದಕ್ಕೆ ಕಾರಣವಾದ ಏಣಿಯನ್ನು ಮರೆಯಬಾರದು ಎನ್ನುವ ಹಿನ್ನೆಲೆಯಲ್ಲಿ ಶಾಲೆಯ ಹಳೆಯ ವಿದ್ಯಾರ್ಥಿಗಳು ತಾವು ಕಲಿತ ಶಾಲೆಯ ಪ್ರಗತಿಗೆ ನೆರವಾಗಬೇಕು. ದಾನಿಗಳು ಸರಕಾರಿ ಶಾಲೆಗೆ ಮಾನ್ಯತೆ ನೀಡುತ್ತಿರುವುದು ಪ್ರಶಂಸನೀಯ ಎಂದು ಮುಂಡರಗಿ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ಹೇಳಿದರು.

ಡಂಬಳ ಹೋಬಳಿಯ ದಿಂಡೂರ ತಾಂಡ ಗ್ರಾಮದಲ್ಲಿ ಇತ್ತೀಚೆಗೆ ನಿವೃತ್ತಿ ಹೊಂದಿದ ಮುಖ್ಯೋಪಾಧ್ಯಾಯ ಆರ್.ಬಿ. ಹೊಸಕೇರಿ ಎಲ್ಲಾ ವಿದ್ಯಾರ್ಥಿಗಳಿಗೆ ಕೊಡುಗೆಯಾಗಿ ನೀಡಿದ 30 ಸಾವಿರ ರೂ ಮೌಲ್ಯದ ಬಟ್ಟೆ ಮತ್ತು ಬ್ಯಾಂಕ್ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಎಚ್ಚರಸ್ವಾಮಿ ನಾಯಕ ಅವರು ಮಗ್ಗಿ-ಸುಗ್ಗಿಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ 5 ಸಾವಿರ ರೂ ಮೌಲ್ಯದ ಶಾಲಾ ಪರಿಕರ, ಗದಗ ನಗರದ ಬಟ್ಟೆ ವ್ಯಾಪಾರಸ್ಥ ಸುರೇಶ ಹಾವನೂರ ಕೊಡುಗೆ ನೀಡಿದ 25 ಊಟದ ತಟ್ಟೆ ಮತ್ತು ಶಿರಹಟ್ಟಿಯ ಸಿಆರ್‌ಪಿ ಎನ್. ಎನ್. ಸಾವಿರಕುರಿ ವಿದ್ಯಾರ್ಥಿಗಳಿಗೆ ಕೊಡಮಾಡಿದ ಟೈ ಮತ್ತು ಬೆಲ್ಟ್ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮುಖ್ಯೋಪಾಧ್ಯಾಯ ವಿನಾಯಕ ಹೊಸಮನಿ ಮಾತನಾಡಿ, ದಿಂಡು ತಾಂಡದಂತಹ ಕುಗ್ರಾಮದ ವಿದ್ಯಾರ್ಥಿಗಳ ಭವಿಷ್ಯ ಉತ್ತಮವಾಗಬೇಕು ಮತ್ತು ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲ ಎಂದು ತೋರಿಸುವಂತೆ ಮಾಡಿರುವ ದಾನಿಗಳ ಕಾರ್ಯ ಪ್ರಶಂಸನೀಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಸ್.ಡಿ.ಎಮ್.ಸಿ ಅಧ್ಯಕ್ಷ ಹನಮಂತಪ್ಪ ಲಮಾಣಿ, ಉಪಾಧ್ಯಕ್ಷೆ ಸಕ್ಕುಬಾಯಿ ಲಮಾಣಿ, ಸದಸ್ಯರು, ಗ್ರಾ.ಪಂ ಸದಸ್ಯರು, ಕುಬೇರ ನಾಯಕ, ಅನ್ನಕ್ಕ ಭೀಮಸಿಂಗ ಲಮಾಣಿ, ಮುಖ್ಯೋಪಾಧ್ಯಾಯ ವಿನಾಯಕ ಹೊಸಮನಿ, ಮಂಜುನಾಥ ಭತ್ತಿಕೊಪ್ಪದ, ಬಿ.ಆರ್. ಗೌಡರ, ಶಿವಣ್ಣ ನಾಯಕ, ಚೇತನ ನಾಗನಗೌಡರ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.



ನಿವೃತ್ತ ಮುಖ್ಯೋಪಾಧ್ಯಾಯ ಆರ್.ಬಿ. ಹೊಸಕೇರಿ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಬಡ ಮಕ್ಕಳು ಅಭ್ಯಾಸ ಮಾಡುತ್ತಿದ್ದು, ಇತರ ವಿದ್ಯಾರ್ಥಿಗಳಂತೆ ಇವರು ಕೂಡ ಉತ್ತಮ ವಸ್ತ್ರ ತೊಡಲಿ, ನಿತ್ಯ ಶಾಲೆಗೆ ಬರಲಿ, ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಕೊಡುಗೆ ನೀಡುವಂತಾಗಲಿ ಎನ್ನುವ ಹಿತದೃಷ್ಟಿಯಿಂದ 98 ವಿದ್ಯಾರ್ಥಿಗಳಿಗೆ 30 ಸಾವಿರ ರೂ ಮೌಲ್ಯದ ಟೀಶರ್ಟ್, ಪ್ಯಾಂಟ್ ಒದಗಿಸಿದ್ದೇನೆ ಎಂದು ಹೇಳಿದರು.

# ಬಸ್-ಲಾರಿ ನಡುವೆ ಭೀಕರ ಅಪಘಾತ: 20 ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ!

■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

KSRTC ಬಸ್ ಹಾಗೂ ಲಾರಿ ನಡುವೆ ಭೀಕರ ಅಪಘಾತ ಸಂಭವಿಸಿರುವ ಘಟನೆ ಜಿಲ್ಲೆಯ ಮಾಡನಾಯಕನಹಳ್ಳಿ ಸಮೀಪ ಜರುಗಿದೆ.

ಘಟನೆಯಲ್ಲಿ 20 ಕ್ಕೂ ಹೆಚ್ಚು ಮಂದಿ ಪ್ರಯಾಣಿಕರಿಗೆ ಗಾಯವಾಗಿದ್ದು, ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ರಾಯಚೂರು ಕಡೆಯಿಂದ ಮೈಸೂರು ಕಡೆ ಏಖಖಖಅ ಬಸ್ ತೆರಳುತ್ತಿದ್ದ ವೇಳೆ ಈ ದುರಂತ ಸಂಭವಿಸಿದೆ. ಲಾರಿ ಚಾಲಕನ ಅಜಾಗರೂಕತೆಯಿಂದ ಈ ಅವಘಡ ಸಂಭವಿಸಿದೆ ಎನ್ನಲಾಗಿದೆ.

ಘಟನೆಯಲ್ಲಿ ಗಾಯಗೊಂಡ ಗಾಯಾಳುಗಳನ್ನು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಅಲ್ಲದೇ ಘಟನೆಯಲ್ಲಿ ಸರ್ಕಾರಿ ಬಸ್ ಚಾಲಕ ಹಾಗೂ ನಿರ್ವಾಹಕನಿಗೆ ಕಾಲು ಮುರಿದಿದೆ ಎನ್ನಲಾಗಿದೆ. ಸ್ಥಳಕ್ಕೆ ತುರುವನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

# ಶಿಕ್ಷಣವಂತರಾಗಿ ಸಮಾಜದಲ್ಲಿ ಉನ್ನತ ಹುದ್ದೆ ಅಲಂಕರಿಸಿ

▶▶ಮೊದಲನೇ ಪುಟದಿಂದ

ಸಾಹಿತ್ಯ ಹಾಗೂ ಸಮಾಜ ಸೇವಾ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಸಮಾಜದ ಪ್ರಮುಖರಾದ ಮೋಹನ ಕಟ್ಟಿಮನಿ, ಎಸ್.ಎನ್. ಬಳ್ಳಾರಿ, ವಾಜಿ ಗಡಾದ, ಪರಶುರಾಮ ಕಟ್ಟಿಮನಿ, ಮೇದಾಪೂರ, ಸುರೇಶ ಕಟ್ಟಿಮನಿ, ಮೋಹನ ಭಜಂತ್ರಿ, ಲಕ್ಷ್ಮವ್ವ ಭಜಂತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಮುದಾಯದವರು ಹಾಜರಿದ್ದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ವಂದಿಸಿದರು. ನಗರದ ವಿ.ಡಿ.ಎಸ್ ಬಾಲಕರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಕಟ್ಟಿಮನಿ ಉಪನ್ಯಾಸ ನೀಡಿದರು.

## ಸಮಾಜದ ಮುಖಂಡರಿಗೆ ಸನ್ಮಾನ

ಸಾಹಿತ್ಯ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಶಿವಾನಂದ ಫಕೀರಪ್ಪ ಭಜಂತ್ರಿ, ಸಮಾಜ ಸೇವಾ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಕ್ಕಾಗಿ ಎಚ್.ಬಿ. ವೀರಾಪೂರ, ಪರಶುರಾಮ ಎಫ್. ಕಟ್ಟಿಮನಿ, ಮೋಹನ್ ಎಚ್.ಕಟ್ಟಿಮನಿ, ಮೋಹನ ಭಜಂತ್ರಿ, ಹುಲ್ಲಪ್ಪ ಭಜಂತ್ರಿ, ವಿಜಯ ಮುಳಗುಂದ, ಡಾ. ಕೆ. ಲೋಕೇಶ ಅವರನ್ನು ಸನ್ಮಾನಿಸಲಾಯಿತು.

ಪಂಡಿತ ಪುಟ್ಟರಾಜ ಗವಾಯಿಗಳ ದೇವಸ್ಥಾನ ನಿರ್ಮಾಣ ಕಾಮಗಾರಿಗೆ ಚಾಲನೆ

# ಪಂ. ಪುಟ್ಟರಾಜ ಗವಾಯಿಗಳು ಪವಾಡ ಪುರುಷರು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಸ್ವಾರ್ಥ ಸೇವೆಯ ಮೂಲಕ ಸಂಗೀತ ಲೋಕಕ್ಕೆ ಅಪಾರ ಕೊಡುಗೆ ನೀಡಿದ ಕೀರ್ತಿ ಪಂಡಿತ ಪುಟ್ಟರಾಜ ಗವಾಯಿಗಳಿಗೆ ಸಲ್ಲುತ್ತದೆ. ಸಮಾಜದಲ್ಲಿ ಅನೇಕ ಬಡ, ಅಂಧ, ಅನಾಥರಿಗೆ ಆಶ್ರಯದಾತ ಎಂದೇ ಹೆಸರುವಾಸಿಯಾಗಿರುವುದು ನಿಜಕ್ಕೂ ಹೆಮ್ಮೆಯ ವಿಷಯವಾಗಿದೆ. ಸಮಾಜದಲ್ಲಿ ಅಂಧರಿಗೂ ಒಂದು ಸುಂದರವಾದ ಲೋಕ ಇದೆ ಎಂಬ ಸಂದೇಶವನ್ನು ಸಾರಿದ್ದಾರೆ ಎಂದು ರೋಣ ಪುರಸಭೆ ಮಾಜಿ ಉಪಾಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಸಿದ್ಧಾರೂಢ ನಗರದಲ್ಲಿ ಶುಕ್ರವಾರ ಪದ್ಮಭೂಷಣ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ದೇವಸ್ಥಾನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕವಿ ಪಂಡಿತ ಪುಟ್ಟರಾಜ ಗವಾಯಿಗಳು ತಮ್ಮ ಜೀವಿತಾವಧಿಯಲ್ಲಿ ಸಂಗೀತ ಲೋಕವನ್ನು ಸೃಷ್ಟಿಸಿದ ಮಹಾನ್ ಪವಾಡ ಪುರುಷರು. ಇಂತಹ ಪೂಜ್ಯರ ದೇವಸ್ಥಾನವನ್ನು ಗ್ರಾಮದ ಸಕಲ ಭಕ್ತರು ಸೇರಿಕೊಂಡು ನಿರ್ಮಿಸುತ್ತಿರುವುದು ಆಧ್ಯಾತ್ಮಿಕ ಪ್ರೇರಣೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಬದುಕಿನ ಒತ್ತಡದಲ್ಲಿ ಆಧ್ಯಾತ್ಮಿಕತೆ ಕಡಿಮೆಗೊಳ್ಳುತ್ತಿರುವುದರಿಂದ ಮಾನಸಿಕ ನೆಮ್ಮದಿ ಇಲ್ಲದಂತಾಗಿದೆ. ದೇವಸ್ಥಾನಗಳು ಮಾನಸಿಕ ಮತ್ತು ಬೌದ್ಧಿಕ ವಿಚಾರಗಳಿಗೆ ಶಾಂತಿ ಮತ್ತು ನೆಮ್ಮದಿ ಕಲ್ಪಿಸುವ ಕೇಂದ್ರಗಳಾಗಿವೆ ಎಂದರು. ಡಾ. ಆರ್.ಬಿ. ಬಸವರಡ್ಡೇರ ಮಾತನಾಡಿ, ಸಿದ್ಧಾರೂಢ ನಗರದ ಎಲ್ಲಾ ಭಕ್ತರು ಸೇರಿಕೊಂಡು ಯಾವುದೇ ಜಾತಿ-ಧರ್ಮವನ್ನು ಮಾಡದೆ ಎಲ್ಲರನ್ನು ಒಗ್ಗೂಡಿಸಿಕೊಂಡು ಪಂಡಿತ ಪುಟ್ಟರಾಜ ಗವಾಯಿಗಳ ದೇವಸ್ಥಾನ ನಿರ್ಮಿಸಲು ತೀರ್ಮಾನ ಮಾಡಿರುವುದು ಒಳ್ಳೆಯ ಸಂಕೇತವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಐ.ಎಸ್. ಪಾಟೀಲ, ಯುವ ಮುಖಂಡ ಅಕ್ಷಯ ಪಾಟೀಲ, ಎಂ.ಎಸ್. ಚಿನ್ನೂರು ಮಾತನಾಡಿದರು. ಯಲ್ಲಾಲಿಂಗೇಶ್ವರ ಮಠದ ಡಾ. ಬಸವರಾಜ ದೇವರು ಸಾನ್ನಿಧ್ಯ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷೆ ಲಲಿತಾ ರಾಠೋಡ, ಪಾಲಾಕ್ಷಯ್ಯ ಅರಳಲಿಮಠ, ಬಸವರಾಜ ಮಲ್ಲಾಪೂರ, ಅಂದಪ್ಪ ವೀರಾಪೂರ, ಬಸವರಾಜ ವೀರಾಪೂರ, ಎಚ್.ಡಿ. ದ್ವಾಸಲ, ಬಸವರಾಜ ತಳವಾರ, ಮಂಜುನಾಥ ಅಂಗಡಿ, ಸುರೇಶ ನಾಯ್ಕರ್, ಸಿದ್ದು ಹರದಾರಿ, ಸಚಿನ ಪಾಟೀಲ, ಅಂದಪ್ಪ ಹಲಕುರ್ಕಿ, ಭೀಮಶಿ ಮಲ್ಲಾಪೂರ, ಶರಣಪ್ಪ ಹುಳ್ಳಿ, ಜಗದೀಶ ಅವರಡ್ಡಿ, ಸೇರಿದಂತೆ ಗ್ರಾ.ಪಂ ಸದ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಪಂಚಾಕ್ಷರಿ ಗವಾಯಿಗಳ ಮಠದ ಪೀಠಾಧಿಪತಿ ಶ್ರೀ ಕಲ್ಲಯ್ಯಜ್ಜನವರು ಮಾತನಾಡಿ, ಅಬ್ಬಿಗೇರಿ ಗ್ರಾಮದಲ್ಲಿ ಆಧ್ಯಾತ್ಮಿಕತೆ, ಪರಂಪರೆಯ ಪದ್ಧತಿಗಳು ಇನ್ನೂ ಜೀವಂತವಾಗಿವೆ. ಶ್ರೀಗಳ ದೇವಸ್ಥಾನವನ್ನು ನಿರ್ಮಿಸುತ್ತಿರುವುದು ಸಂತೋಷದ ವಿಷಯವಾಗಿದೆ ಎಂದರು.

# ಕೈಮಗ್ಗ ನೇಕಾರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕ ವಿನ್ಯಾಸದ ಗದಗ-ಬೆಟಗೇರಿ ಸೀರೆಗಳನ್ನು ಅಂತಾರಾಷ್ಟ್ರೀಯ ಮಟ್ಟದದವರೆಗೂ ಪರಿಚಯಿಸಿ, ಬೃಹತ್ ಮಾರುಕಟ್ಟೆ ನಿರ್ಮಿಸಿ ಸಾವಿರಾರು ಕುಟುಂಬಗಳಿಗೆ ಉದ್ಯೋಗ ನೀಡುತ್ತಿರುವ ಬಸವಾ ಕುಟುಂಬದ ಬಲರಾಮ ಎಸ್.ಬಸವಾ (4ನೇ ತಲೆಮಾರು), ಮಾತೋಶ್ರೀ ತಿಪ್ಪುಬಾಯಿ ಎಸ್.ಬಸವಾ ಇವರ ಕುಟುಂಬದ ಸದಸ್ಯರಿಗೆ ಗದಗ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ವತಿಯಿಂದ ಸನ್ಮಾನಿಸಲಾಯಿತು.

ಬ್ಯಾಂಕ್‌ನ ಹಿರಿಯ ಅಧಿಕಾರಿಗಳಾದ ಹರೀಶ, ಅರವಿಂದ, ಜಿಲ್ಲಾ ಅಧಿಕಾರಿ ನಾಗರಾಜ ಹಾಗೂ ಸಂಜಯ ಮುಕ್ಕಣ್ಣೇಶ್ವರ ಶ್ರೀಗಳ ದಿವ್ಯ ಸಾನ್ನಿಧ್ಯದಲ್ಲಿ ಸನ್ಮಾನಿಸಿ ಗೌರವಿಸಿದರು.


ವಿಶ್ವಕರ್ಮ ಹಾಗೂ ಸ್ಟಾರ್ಟಪ್ ಯೋಜನೆಗಳ ಪ್ರಯೋಜನ ಪಡೆದು ಪುರಾತನ ಕೈಮಗ್ಗದ ಉಳಿವಿಗಾಗಿ ಎಲ್ಲರೂ ಪ್ರಯತ್ನಿಸಬೇಕೆಂದು ಹೇಳಿದರು.

# ವಿಶೇಷ ಪೂಜೆ, ಅನ್ನ ಸಂತರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿವೇಕಾನಂದ ರಸ್ತೆಯ ಮಸಾರಿ ಗದಗದಲ್ಲಿ ಪ್ರತಿ ವರ್ಷದಂತೆ ಶ್ರಾವಣ ಮಾಸದ ಪ್ರಯುಕ್ತ ಆಗಸ್ಟ್ 10ರಂದು ಶ್ರೀಬನ್ನಿ ಮಹಾಂಕಾಳಿ ದೇವಿಯ ಸನ್ನಿಧಿಯಲ್ಲಿ ದೇವಿಗೆ ವಿಶೇಷ ಪೂಜೆ, ಅಲಂಕಾರ, ಮಧ್ಯಾಹ್ನ 12 ಗಂಟೆಗೆ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಭಕ್ತಾಧಿಗಳು ತನು-ಮನ-ಧನದಿಂದ ಸಹಕರಿಸಿ, ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಗೋವಿಂದರಾಜ ಮಕ್ತುಮ್ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ಪಿಂಚಣಿ ಯೋಜನೆ ಜಾರಿ ಕುರಿತ ಸಭೆ ಆ.12ಕ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರಿ ನೌಕರರ ಹಳೆಯ ಪಿಂಚಣಿ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತ ಚರ್ಚೆ ನಡೆಸುವ ಮಹತ್ವದ ಸಮಿತಿ ಸಭೆಯು ರಾಜ್ಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಉಮಾ ಮಹದೇವನ್ ಅವರ ಅಧ್ಯಕ್ಷತೆಯಲ್ಲಿ ಆ. 12ರಂದು ಸಂಜೆ 4 ಗಂಟೆಗೆ ವಿಧಾನಸೌಧದಲ್ಲಿ ನಡೆಯಲಿದೆ ಎಂದು ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರಿ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಳೆಯ ಪಿಂಚಣಿ ಯೋಜನೆ ಜಾರಿ ಸಂಬಂಧ ಸರಕಾರದ ಕಾರ್ಯದರ್ಶಿ ರಮಣದೀಪ್ ಅವರ ನೇತೃತ್ವದ ಸಮಿತಿ ಈಗಾಗಲೇ ಅಧ್ಯಯನ ವರದಿಯನ್ನು ರಾಜ್ಯ ಸರಕಾರಕ್ಕೆ ಸಲ್ಲಿಸಿದೆ. ಸರಕಾರದ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರು ಆಂಧ್ರಪ್ರದೇಶಕ್ಕೆ ಭೇಟಿ ನೀಡಿ, ಅಧ್ಯಯನ ನಡೆಸಿ, ವರದಿಯನ್ನು ರಾಜ್ಯ ಸರಕಾರಕ್ಕೆ ಸಲ್ಲಿಸಿದ್ದಾರೆ. ಉಭಯ ಕಾರ್ಯದರ್ಶಿಗಳು ನೀಡಿರುವ ವರದಿ ಕುರಿತ ಚರ್ಚೆ ಸಭೆಯಲ್ಲಿ ನಡೆಯಲಿದೆ.

ಹೊಸ ಪಿಂಚಣಿ ಯೋಜನೆ ಕೈಬಿಡಿ, ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿ ಎಂದು ರಾಜ್ಯ ಸರಕಾರ ನೌಕರ ಸಂಘ ಸಿ.ಎಸ್. ಷಡಕ್ಷರಿ ಅವರ ಮಾರ್ಗದರ್ಶನದಲ್ಲಿ ಹೋರಾಟ ನಡೆಸಿದ್ದಾರೆ. ಸಂಘದ ಹಲವು ವರ್ಷಗಳ ಫಲ ಸಿಗುವ ಕಾಲ ಸನ್ನಿಹಿತವಾಗಿದೆ ಎಂದು ಡಾ. ಬಸವರಾಜ ಬಳ್ಳಾರಿ ಹೇಳಿದ್ದಾರೆ.

### ಕದಳಿಶ್ರೀ ವೇದಿಕೆಯ 'ಅಮೃತ ಭೋಜನ ಜ್ಞಾನ ಸಿಂಚನ ಮಾಲಿಕೆ-7'ರಲ್ಲಿ ಡಾ. ಪ್ರೇಮಲತಾ ಕರೆ

## ಸಮಾನ ಅವಕಾಶ ಪಡೆದು ಜ್ಞಾನವಂತರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲೆ ಎನ್ನುವುದು ಕಲಿಕೆಯ ಸ್ಥಳ. ಶಾಲೆ ಸಮಾಜದ ಪ್ರತಿಬಿಂಬ. ಕಲಿಕೆ ಎನ್ನುವುದು ಅಕ್ಷರ ಜ್ಞಾನಕ್ಕಷ್ಟೇ ಸೀಮಿತವಾಗಿಲ್ಲ. ಮೌಲ್ಯ ಹಾಗೂ ಉತ್ತಮ ಭಾವನೆಗಳನ್ನು ಬೆಳೆಸಿಕೊಳ್ಳುವ ಒಂದು ಸೂಕ್ತ ವೇದಿಕೆ. ಪ್ರತಿಯೊಂದು ಮಗು ಮೌಲ್ಯಯುತರಾಗಿ ರೂಪುಗೊಳ್ಳಲು ಶಾಲೆಯು ಸಹಕಾರಿ ಎಂದು ಡಾ. ಪ್ರೇಮಲತಾ ಹಿರೇಮಠ ಹೇಳಿದರು.

ಅವರು ಗದುಗಿನ ಸರ್ಕಾರಿ ಶಾಲೆಗಳಾದ ಮೌಲಾನ ಅಜಾದ್ ಮಾದರಿ ಶಾಲೆ, ಸರ್ಕಾರಿ ಕನ್ನೆ ಶಾಲೆ ನಂ.6 ಹಾಗೂ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆ ನಂ.3ರ ವಿದ್ಯಾರ್ಥಿಗಳಿಗೆ ಗದಗ ಜಿಲ್ಲಾ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ 'ಅಮೃತ ಭೋಜನ ಜ್ಞಾನ ಸಿಂಚನ ಮಾಲಿಕೆ-7'ರಲ್ಲಿ ಮಕ್ಕಳಿಗೆ ಸಿಹಿ ವಿತರಿಸಿ ಮಾತನಾಡಿದರು.



ಶಾಲೆಯಲ್ಲಿ ಮಕ್ಕಳು ಸಮಾನವಾದ ಅವಕಾಶ ಪಡೆದು ಜ್ಞಾನವಂತರಾಗಬೇಕು. ಸರ್ಕಾರಿ ಶಾಲೆಗಳು ಮಕ್ಕಳಿಗೆ ಬದುಕಿನ ಆಗು-ಹೋಗುಗಳಿಗೆ ಉತ್ತರಗಳನ್ನು ಹೇಳಿಕೊಡುತ್ತವೆ. ಮಕ್ಕಳ ಮಾತನ್ನು ಆಲಿಸುವ ಹಾಗೂ ಅವರ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ನಾವು ಅವಕಾಶ ಕಲ್ಪಿಸಬೇಕು. ಮಕ್ಕಳೊಂದಿಗೆ ನಡೆಸುವ ಎಲ್ಲ ಸಂವಹನವು ಮಕ್ಕಳ ಸ್ನೇಹಿಯಾಗಿದ್ದು, ಅವರಿಂದ ಬರುವ ಅಭಿಪ್ರಾಯಗಳಿಗೆ ಆದ್ಯತೆ ನೀಡಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಶಿಕ್ಷಕ ಬಳಗ ಒತ್ತು ನೀಡಬೇಕು ಎಂದರು.

ಪ್ರಾಸ್ತಾವಿಕವಾಗಿ ಕವಿತಾ ಬೇಲೇರಿ ಮಾತನಾಡಿ, ಪ್ರತಿಯೊಂದು ಮಗುವು ಅನನ್ಯ. ಪ್ರತಿ ಮಗುವಿನ ಕಲಿಕೆ ವ್ಯಕ್ತಿಗತ, ವ್ಯಕ್ತಿಗತ ಕಲಿಕೆಯಲ್ಲಿ ಕಲಿಕೆಯ ರೀತಿ, ಶೈಲಿ, ಕಲಿಕಾ ವೇಗಾ ಒಂದು ಮಗುವಿನಿಂದ ಇನ್ನೊಂದು ಮಗುವಿಗೆ ಭಿನ್ನವಾಗಿರುತ್ತದೆ. ಈ ಎಲ್ಲ ಅಂಶಗಳನ್ನು ಪರಿಗಣಿಸಿ ಮಕ್ಕಳಿಗೆ ಸಂತಸದಾಯಕ ಕಲಿಕೆಯಲ್ಲಿ ತೊಡಗಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಕದಳಿ ವೇದಿಕೆಯು ಪ್ರತಿವರ್ಷ ಶಾಲೆಗಳಲ್ಲಿ ಅಮೃತ ಭೋಜನ ಜ್ಞಾನಸಿಂಚನ ಕಾರ್ಯಕ್ರಮ ನಡೆಸುತ್ತಿರುವುದು ದಾನಿಗಳ ಸಹಕಾರದಿಂದ. ಇಂದು ಗದುಗಿನ ಖ್ಯಾತವೈದ್ಯರಾದ ಶರಣೆ ಡಾ. ರಾಧಿಕಾ ಉದಯ ಕುಲಕರ್ಣಿ ಹಾಗೂ ಶರಣೆ ಡಾ. ಪ್ರೇಮಲತಾ ಹಿರೇಮಠ ಇವರು ಮೂರು ಸರ್ಕಾರಿ ಶಾಲೆಗಳ ಮಕ್ಕಳಿಗೆ ಅಮೃತ ಭೋಜನ ಏರ್ಪಡಿಸಿ ಕಲಿಕಾ ಸಾಮಗ್ರಿ ವಿತರಿಸಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ಎಂ.ಎಂ. ಜೋಗಿನ ಮಾತನಾಡಿ, ಶ್ರಾವಣದಲ್ಲಿ ಕದಳಿಶ್ರೀ ವೇದಿಕೆಯವರು ಶಾಲೆಗಳಲ್ಲಿ ವಿಶಿಷ್ಠ ಕಾರ್ಯಕ್ರಮ ಹಮ್ಮಿಕೊಂಡು ಶರಣರ ತತ್ವ ಹಾಗೂ ಸಿದ್ಧಾಂತಗಳನ್ನು ಮಕ್ಕಳಿಗೆ ತಲುಪಿಸುವ ಕಾರ್ಯ ನಿರ್ವಹಿಸುತ್ತಿದ್ದಾರೆ. ಜೊತೆಗೆ ಸಿಹಿ ಭೋಜನ, ಕಲಿಕಾ ಸಾಮಗ್ರಿ ವಿತರಣೆ, ಹಿರಿಯರ ಅನುಭವದ ಮಾತುಗಳು ಕಲಿಕೆಗೆ ಸ್ಫೂರ್ತಿ ನೀಡುತ್ತಿವೆ ಎಂದರು.

ಸಿದ್ದಮ್ಮ ಗೌಡರ, ಜ್ಯೋತಿ ಕಮದೊಡ ವಚನ ಪ್ರಾಚನ ಪ್ರಾರ್ಥನೆ ಮಾಡಿದರು. ಎಂ.ಎ. ಕಂದಗಲ್ ಸ್ವಾಗತಿಸಿದರು. ಸವಿತಾ ನಾಯಕ ನಿರೂಪಿಸಿದರು. ಸಹನಾ ನಿಡಗುಂದಿ ವಂದಿಸಿದರು. ಯಶವಂತ ಬೇವಿನಕಟ್ಟಿ, ಹನುಮಂತಪ್ಪ ಜೋರಾಳ, ಲಕ್ಷ್ಮೀ ಕುಪ್ಪರ, ಪದ್ಮಾ ಮಾನ್ವಿ, ರೇಣುಕಾ ಇಲಕಲ್, ರೇಖಾ ಮಣ್ಣೊಡ್ಡರ, ಭವಾನಿ ನಾಯಕ, ಹಸೀನಾ ಹಳೆಮಸೂತಿ, ಅರ್ಪಿತಾ ಗಾಳಿ ಮುಂತಾದವರಿದ್ದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರಾ. ದೀಪಾ ಹೂಗಾರ ಮಾತನಾಡಿ, ನಾವು ಮಕ್ಕಳಿಗೆ ಸ್ನೇಹಮಯ ವಾತಾವರಣ, ಸಾಮರ್ಥ್ಯಕ್ಕೆ ತಕ್ಕಂತೆ ಉತ್ತಮ ಪರಿಸರ, ಕಾರ್ಯ ನಿರ್ವಹಣಾ ವಿಧಾನಗಳನ್ನು ತಿಳಿಸಬೇಕು. ಅರಿವು, ಮಾರ್ಗದರ್ಶನ ಹಾಗೂ ಆಪ್ತ ಸಮಾಲೋಚನೆಗಳನ್ನು ಶಾಲಾ ಹಂತದಲ್ಲಿ ನಡೆಸುವುದರಿಂದ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಸ್ಫೂರ್ತಿ ದೊರೆಯುತ್ತದೆ ಎಂದರು.

### ಎಮ್‌ಪಿ, ಎಮ್‌ಎಲ್‌ಸಿ ಪ್ರದೇಶಾಭಿವೃದ್ಧಿಗಳ ಅನುದಾನದ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ

## ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಿ



> ಕಾಮಗಾರಿ ಬದಲಾವಣೆಗೆ ಬಯಸಿದಲ್ಲಿ ಸಂಬಂಧಿತ ಜನಪ್ರತಿನಿಧಿಗಳಿಂದ ಕಾಮಗಾರಿ ಬದಲಾವಣೆ ಕುರಿತಂತೆ ಮಾಹಿತಿ ಸಲ್ಲಿಸಿ ಕಾಮಗಾರಿ ಮಾರ್ಪಡಿಸಲು ಅವಕಾಶವಿದ್ದು, ಅನುಷ್ಠಾನ ಏಜೆನ್ಸಿಗಳು ಈ ಕುರಿತಂತೆ ಸೂಕ್ತ ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರುಗಳ ಪ್ರದೇಶಾಬಿವೃದ್ಧಿ ಅನುದಾನದಡಿಯಲ್ಲಿ ಕೈಗೊಂಡ ಕಾಮಗಾರಿಗಳ ಕುರಿತಂತೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್ ಅಧ್ಯಕ್ಷತೆಯಲ್ಲಿ ಶುಕ್ರವಾರ ಜಿಲ್ಲಾಡಳಿತ ಭವನದಲ್ಲಿ ಪ್ರಗತಿ ಪರಿಶೀಲನೆ ಜರುಗಿತು.

ಎಮ್‌ಪಿ ಹಾಗೂ ಎಮ್‌ಎಲ್‌ಸಿ ಪ್ರದೇಶಾಭಿವೃದ್ಧಿ ಅನುದಾನದಡಿ ಕೈಗೊಂಡ ಕಾಮಗಾರಿಗಳ ಪ್ರಗತಿ ಪರಿಶೀಲನೆಯು ಕೆಡಿಪಿ ಸಭೆಯಲ್ಲಿ ಚರ್ಚೆಗೆ ಕೈಗೆತ್ತಿಕೊಳ್ಳಲಾಗುತ್ತದೆ. ಕೆಡಿಪಿ ವರದಿಯನ್ನು ನೇರವಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಗಮನಿಸುವರು. ಇದನ್ನೆಲ್ಲ ಅನುಷ್ಠಾನ ಏಜೆನ್ಸಿಗಳು ಗಮನದಲ್ಲಿಟ್ಟುಕೊಂಡು ಕಾಮಗಾರಿಗಳನ್ನು ನಿರ್ವಹಿಸಬೇಕು ಎಂದು ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ಕಾಮಗಾರಿ ನಿರ್ವಹಿಸುವಾಗ ನಿಗದಿಪಡಿಸಿದ ಅವಧಿ ಹಾಗೂ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು. ಕಾಮಗಾರಿ ಅನುಷ್ಠಾನದಲ್ಲಿ ತೊಡುಕುಗಳು ಎದುರಾದಲ್ಲಿ ತಕ್ಷಣವೇ ಜಿಲ್ಲಾಡಳಿತದ ಹಾಗೂ ಸಂಬಂಧಿಸಿದ ಜನಪ್ರತಿನಿಧಿಗಳ ಗಮನಕ್ಕೆ ತರುವ ಮೂಲಕ ಪರಿಹಾರ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

2022-23 ಹಾಗೂ 2023-24ರ ಆರ್ಥಿಕ ವರ್ಷದಲ್ಲಿ ಕೈಗೊಂಡ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಬೇಕು. ಪೂರ್ಣಗೊಳಿಸಿದ ಮಾಹಿತಿಯನ್ನು ಮುಂದಿನ ಒಂದು ವಾರದೊಳಗಾಗಿ ಗಾಂಧೀ ಸಾಕ್ಷಿ ಪೋರ್ಟಲ್‌ನಲ್ಲಿ ನಿಯಮಾನುಸಾರ ಛಾಯಾಚಿತ್ರಗಳೊಂದಿಗೆ ಅಪ್‌ಲೋಡ್ ಮಾಡಬೇಕು. ನೋಂದಣಿಗೆ ವಿನಾಕಾರಣ ವಿಳಂಬ ಬೇಡ ಎಂದು ಸೂಚಿಸಿದರು. ಕಾಮಗಾರಿ ಪೂರ್ಣಗೊಳಿಸಿದ ಬಗ್ಗೆ ಥರ್ಡ್ ಪಾರ್ಟಿ ಪರಿಶೀಲನಾ ವರದಿ ಕಡ್ಡಾಯವಾಗಿದೆ. 2023-24ರ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಠಾನ ಏಜೆನ್ಸಿಗಳು ಆಗಸ್ಟ್ 20ರೊಳಗಾಗಿ ಬಾಕಿ ಉಳಿದ ಅಂದಾಜು ಪಟ್ಟಿ ಸಲ್ಲಿಸಬೇಕು. ಜೊತೆಗೆ ಕಾಮಗಾರಿ ಪೂರ್ಣಗೊಳಿಸಿದ ಕುರಿತಂತೆ ಬಳಕೆ ಪ್ರಮಾಣಪತ್ರ ನೀಡಬೇಕು. ಒಟ್ಟಾರೆ ಒದಗಿಸಿದ ಅನುದಾನ ಸದ್ಬಳಕೆಯಾಗುವಂತೆ ಅನುಷ್ಠಾನ ಏಜೆನ್ಸಿಗಳು ಕೆಲಸ ನಿರ್ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ನಿರ್ಮಿತಿ ಕೇಂದ್ರ, ಪಿಆರ್‌ಇಡಿ, ಕೆಆರ್‌ಐಡಿಎಲ್, ಗ್ರಾಮೀಣ ನೀರು ಸರಬರಾಜು, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿಧ ಅನುಷ್ಠಾನ ಏಜೆನ್ಸಿ ಹಾಗೂ ಇಲಾಖೆಗಳ ಮುಖ್ಯಸ್ಥರು ಹಾಗೂ ಪ್ರತಿನಿಧಿಗಳು ಪಾಲ್ಗೊಂಡು ತಮಗೆ ವಹಿಸಿದ ಕಾಮಗಾರಿಗಳ ಕುರಿತು ಪ್ರಗತಿ ವರದಿಯನ್ನು ನೀಡಿದರು.

## ನುಡಿದಂತೆ ನಡೆದ ಶ್ರೇಷ್ಠ ವಚನಕಾರ ನುಲಿಯ ಚಂದಯ್ಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೊರಚ, ಕೊರವ ಸಮುದಾಯದ ಸಾಂಸ್ಕೃತಿಕ ಪ್ರತಿನಿಧಿಯಾಗಿ ಕಾಯಕದಲ್ಲಿಯೇ ದೇವರನ್ನು ಕಂಡ ಮಹಾನ್ ಶರಣ ನುಲಿಯ ಚಂದಯ್ಯನವರು ಎಂದು ಮುಖ್ಯ ಶಿಕ್ಷಕ ಬಿ.ಬಿ. ಕುರಿ ಹೇಳಿದರು.


ಪಟ್ಟಣದ ಕೆಜಿಎಸ್ ಸರ್ಕಾರಿ ಶಾಲೆಯಲ್ಲಿ ಶಿವಶರಣ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹುಲ್ಲು ತಂದು ಹಗ್ಗ ಹೊಸೆದು, ಮಾರಾಟ ಮಾಡಿ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದರು. ಗುರು-ಲಿಂಗ-ಜಂಗಮರ ತತ್ವವನ್ನು ಜಗತ್ತಿಗೆ ಪಸರಿಸಿ, ನುಡಿದಂತೆ ನಡೆದ ಶ್ರೇಷ್ಠ ವಚನಕಾರರಾಗಿದ್ದರು. ಬಸವಣ್ಣನವರ ವಿನೂತನ ವಿಚಾರಧಾರೆಗೆ, ಧಾರ್ಮಿಕ ಚಿಂತನೆಗೆ ಆಕರ್ಷಿತರಾಗಿ ಕಲ್ಯಾಣಕ್ಕೆ ಬಂದು ದಾಸೋಹ ಮಾಡುತ್ತ ಬದುಕಿದ ಶ್ರೇಷ್ಠ ಕಾಯಕ ಯೋಗಿ. ಇಂತಹ ಶರಣರ ವಚನಗಳನ್ನು ಓದಿ ಅವರು ಹಾಕಿಕೊಟ್ಟ ದಾರಿಯಲ್ಲಿ ನಾವೆಲ್ಲರೂ ನಡೆಯೋಣ ಎಂದರು.

ಈವೇಳೆ ವಿದ್ಯಾರ್ಥಿಗಳು ಶಿವಶರಣ ನುಲಿಯ ಚಂದಯ್ಯನವರ ಬಗ್ಗೆ ಮಾತನಾಡಿದರು. ಎನ್.ಎಲ್. ಚವ್ಹಾಣ, ಎಂ.ಪಿ. ಅಣಗೌಡರ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ಎಸ್.ಐ. ಜಗಾಪೂರ, ರಾಜೇಶ್ವರಿ ತೊಂಡಿಹಾಳ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

ಕೋಡಿಕೊಪ್ಪದ ಶಾಲೆಯಲ್ಲಿ: ಕೋಡಿಕೊಪ್ಪದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನುಲಿಯ ಚದಯ್ಯನವರ ಜಯಂತಿಯನ್ನು ಆಚರಿಸಲಾಯಿತು. ಶರಣರ ತತ್ವಗಳನ್ನು ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ತಿಳಿಸಿದರು. ಈ ಸಂದರ್ಭದಲ್ಲಿ ಶಿಕ್ಷಕಿಯರಾದ ಎಲ್.ಎಸ್. ಶಿವಪ್ಪಗೌಡ್ರ, ಎಲ್.ಎಸ್. ಗಂಗಾಪೂರ, ಎನ್.ಎ. ಹುಬ್ಬಳ್ಳಿಕರ ಮತ್ತು ಶಿಕ್ಷಕರಾದ ಬಿ.ಎಸ್. ಕರಮುಡಿ, ಜೆ.ಡಿ. ಶಾಲ್ದಾರ ಉಪಸ್ಥಿತರಿದ್ದರು.

## ಶ್ರೀ ಮೈಲಾರಲಿಂಗೇಶ್ವರ ಪಲ್ಲಕ್ಕಿ ಮಹೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಮೈಲಾರಲಿಂಗೇಶ್ವರ ಜಾತ್ರಾ ಮಹೋತ್ಸವವು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಪಲ್ಲಕ್ಕಿ ಮಹೋತ್ಸವದಲ್ಲಿ ಭಕ್ತರು ದೀಡನಮಸ್ಕಾರ ಹಾಕುವುದರ ಮೂಲಕ ಏಳು ಕೋಟಿ ಏಳು ಕೋಟಿ ಎಂದು ಕೂಗುತ್ತಾ ಸಾಗಿದರು. ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ಹೂಮಾಲೆ ಹಾಗೂ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಬೆಳಿಗ್ಗೆ ಶ್ರೀ ಮೈಲಾರಲಿಂಗೇಶ್ವರ ದೇವರಿಗೆ ಪಂಚಾಮೃತ ಅಭಿಷೇಕ, ದೇವರಿಗೆ ಚಿನ್ನ-ಬೆಳ್ಳಿ ಆಭರಣಗಳಿಂದ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು. ನೂರಾರು ಭಕ್ತರು ಮಹಾ ಪ್ರಸಾದ ಸ್ವೀಕರಿಸಿ ದೇವರ ಕೃಪೆಗೆ ಪಾತ್ರರಾದರು.

## ಬೈಕ್‌ಗೆ ಲಾರಿ ಡಿಕ್ಕಿ: ಎರಡು ತಿಂಗಳ ಹಿಂದೆ ಮದುವೆ ಆಗಿದ್ದ ನವವಿವಾಹಿತೆ ಸಾವು!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನ ಲಗ್ಗೆರೆ ಬಳಿ ಭೀಕರ ಅಪಘಾತ ಸಂಭವಿಸಿ ಎರಡು ತಿಂಗಳ ಹಿಂದೆ ಮದುವೆಯಾಗಿದ್ದ ನವವಿವಾಹಿತೆ ಸಾವನ್ನಪ್ಪಿರುವ ಘಟನೆ ಜರುಗಿದೆ.

23 ವರ್ಷದ ಗೀತಾ ಸಾವಿಗೀಡಾದ ನವವಿವಾಹಿತೆ. ಗೀತಾ ಎರಡೂವರೆ ತಿಂಗಳ ಹಿಂದಷ್ಟೇ ಸುನೀಲ್ ಎಂಬುವರನ್ನು ವಿವಾಹವಾಗಿದ್ದರು.

ಶುಕ್ರವಾರ ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆ ಅರಿಶಿಣ ಕುಂಕುಮ ಪಡೆಯಲೆಂದು ನಂದಿನಿ ಲೇಔಟ್‌ನಲ್ಲಿರುವ ನಾದಿನಿ ಮನೆಗೆ ದಂಪತಿ ಹೊರಟಿದ್ದರು.

ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಲಗ್ಗೆರೆ ಬ್ರಿಡ್ಜ್ ಬಳಿ ಬೈಕ್‌ಗೆ ಲಾರಿ ಡಿಕ್ಕಿಯಾಗಿದೆ.

ಘಟನೆಯಲ್ಲಿ ತಲೆಗೆ ತೀವ್ರ ಪೆಟ್ಟು ಬಿದ್ದು ಗೀತಾ ಸ್ಥಳದಲ್ಲೇ ಸಾವನ್ನಪ್ಪಿದ್ದು, ಗಂಡ ಸುನೀಲ್‌ಗೆ ಗಾಯಗಳಾಗಿವೆ. ಅಪಘಾತ ಸಂಬಂಧ ಲಾರಿ ಚಾಲಕ ಸುರೇಶ್‌ನನ್ನು ರಾಜಾಜಿನಗರ ಸಂಚಾರ ಠಾಣೆ ಪೊಲೀಸರು ಬಂಧಿಸಿದ್ದಾರೆ.



ಶರಣ ನುಲಿಯ ಚಂದಯ್ಯ ಜಯಂತ್ಯುತ್ಸವದ ಅಂಗವಾಗಿ ನುಲಿಯ ಚಂದಯ್ಯ ಭಾವಚಿತ್ರ ಮೆರವಣಿಗೆಯು ಗದಗ ನಗರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಆರಂಭಗೊಂಡು ಮುಳಗುಂದ ನಾಕಾ ಮಾರ್ಗವಾಗಿ ಜಿಲ್ಲಾಡಳಿತ ಭವನ ತಲುಪಿತು. ಮೆರವಣಿಗೆಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಈ ವೇಳೆ ಸಮಾಜದ ಮುಖಂಡರು ಹಾಗೂ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ರೈತರಿಂದಲೇ ವರ್ತಕರ ಬದುಕು ಹಸನು



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಎ.ಪಿ.ಎಂ.ಸಿ ಯಾರ್ಡ್‌ನಲ್ಲಿ ಶನಿವಾರ ಬೆಳಿಗ್ಗೆ ಎ.ಪಿ.ಎಂ.ಸಿ ವರ್ತಕರ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಶ್ರೀ ಗಜಾನನ ಧ್ವಜ ಸ್ತಂಭವನ್ನು ಪ್ರತಿಷ್ಠಾಪನೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ ಮಾತನಾಡಿ, ಮಳೆ-ಬೆಳೆ ಸಮೃದ್ಧವಾಗಿ ಆಗಿ ರೈತರ ಬದುಕು ಬಂಗಾರವಾದಾಗ ಮಾತ್ರ ವರ್ತಕರ ಬದುಕು ಹಸನಾಗಲಿದೆ. ಪ್ರಥಮ ಪೂಜಿತ ಗಣೇಶನಲ್ಲಿ ಪ್ರಾರ್ಥನೆ ಮಾಡಿ ರೈತರಿಗೆ ಮತ್ತು ವರ್ತಕರಿಗೆ ಯಾವುದೇ ವಿಘ್ನ ಬಾರದಂತೆ ಪ್ರಾರ್ಥನೆ ಸಲ್ಲಿಸೋಣ ಎಂದರು.

ಟ್ರಸ್ಟ್ ಕಮಿಟಿ ಗೌರವಾಧ್ಯಕ್ಷ ಪ್ರಮೋದ್ ವಾರಕರ್, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ನೀತಿಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ಕಾಡಪ್ಪನವರ, ಅಶೋಕ ಗಡಾದ, ದಲಾಲ ವರ್ತಕರ ಸಂಘದ ಹಾಗೂ ಖರೀದಿ ವರ್ತಕರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

### ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮ

## ಸಂಸ್ಥೆಯ ಸದಸ್ಯರಿಗೆ ವಿವಿಧ ಸ್ಪರ್ಧೆಗಳು ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರದಮ ನಿಮಿತ್ತ ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಗದಗ-2025ರಲ್ಲಿ ಸಂಸ್ಥೆಯ ಸದಸ್ಯರಿಗೆ ಓಟದ ಸ್ಪರ್ಧೆ, ಮ್ಯೂಜಿಕಲ್ ಚೇರ್, ಹಗ್ಗ-ಜಗ್ಗಾಟ ಸ್ಪರ್ಧೆಗಳುನ್ನು ಆಗಸ್ಟ್ 10ರಂದು ಬೆಳಿಗ್ಗೆ 10 ಗಂಟೆಗೆ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ಉದ್ಘಾಟಕರಾಗಿ ಸಂಕನೂರ ಹಾಸ್ಪಿಟಲ್-ಸಂಶೋಧನಾ ಕೇಂದ್ರದ ಸಂಸ್ಥಾಪಕ ಡಾ. ಪ್ರಕಾಶ ಎಸ್.ಸಂಕನೂರ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಡಾ. ಶ್ವೇತಾ ಪ್ರಕಾಶ ಸಂಕನೂರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕುಸ್ತಿ ಕ್ರೀಡಾಪಟು ಪ್ರೇಮಾ ಹುಚ್ಚಣ್ಣವರ, ಕರಾಟೆ ಪಟುಗಳಾದ ಮನಿಶಾ ಎಂ.ಕಬ್ಬೂರ, ಫಾಲ್ಗುಣಿ ಎ.ವಾರಕರ್ ಆಗಮಿಸುವರು.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ವಹಿಸುವರು. ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಉಪಸ್ಥಿತರಿರುವರು. ಕ್ರೀಡಾ ಉಪ ಸಮಿತಿ ಚೇರಮನ್ ಶರಣು ವ್ಹಿ., ಕೋ-ಚೇರಮನ್ ಪ್ರಮೋದ ವಾರಕರ, ಗದಗ ಉತ್ಸವ-2025ರ ಚೇರಮನ್ ಆನಂದ ಎಲ್.ಪೊತ್ನೀಸ, ಕೋ-ಚೇರಮನ್ ಸದಾಶಿವಯ್ಯ ಎಸ್.ಮದರಿಮಠ, ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ, ವಿಜಯಕುಮಾರ ಎಸ್.ಮಾಟಲದಿನ್ನಿ, ಎಸ್.ಆರ್. ನಾಲ್ವತಾಡಮಠ, ಸಹ ಗೌರವ ಕಾರ್ಯದರ್ಶಿಗಳಾದ ರಾಘವೇಂದ್ರ ಎಸ್.ಕಾಲವಾಡ, ಸೋಮನಾಥ ಕೆ.ಜಾಲಿ, ಕೋಶಾಧ್ಯಕ್ಷ ಸಂಜಯ ಸಿ.ಬಾಗಮಾರ, ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಜಯಶ್ರೀ ತಾತನಗೌಡ ಪಾಟೀಲ, ಸುವರ್ಣಾ ಎಸ್. ಮದರಿಮಠ, ಮಹಿಳಾ ಘಟಕದ ಉಪಾಧ್ಯಕ್ಷರಾದ ದೀಪಾ ಎಸ್. ಗದಗ, ಸುಷ್ಮಾ ಎಸ್.ಜಾಲಿ, ಸುಜಾತಾ ಎಸ್.ಗುಡಿಮನಿ, ಗೌರವ ಕಾರ್ಯದರ್ಶಿಗಳಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ, ಸಹ ಗೌರವ ಕಾರ್ಯದರ್ಶಿಗಳಾದ ಲಲಿತಾ ಜಿ.ತಡಸದ, ಸುಧಾ ಸಿ. ಹುಣಸಿಕಟ್ಟಿ, ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ಸರ್ವರನ್ನು ಸ್ವಾಗತಿಸಿದ್ದಾರೆ ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka